ಸತ್ಯ ಮತ್ತು ಧೈರ್ಯದ ಧ್ವನಿ

ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 142 | ರಾಯಚೂರು Raichur | 13-11-2026 | ಶುಕ್ರವಾರ Friday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

ದೀಪಾವಳಿ ಹಬ್ಬದ ಶುಭಾಶಯಗಳು!

ರಾಮಾಯಣ ಅಬ್ಬರ: ಏಳು ದಿನಗಳಲ್ಲಿ ₹934.55 ಕೋಟಿ ಗಳಿಕೆ, ₹1,000 ಕೋಟಿ ಗಡಿಯತ್ತ ದಾಪುಗಾಲು



ಬೆಂಗಳೂರು, ನ.12: ಬಾಲಿವುಡ್ ನಟ ರಣಬೀರ್ ಕಪೂರ್ ಹಾಗೂ ಕನ್ನಡದ ರಾಕಿಂಗ್ ಸ್ಟಾರ್ ಯಶ್ ಅಭಿನಯದ ಬಹುನಿರೀಕ್ಷಿತ ರಾಮಾಯಣ: ಪಾರ್ಟ್ 1 ಚಿತ್ರವು ಜಾಗತಿಕ ಬಾಕ್ಸ್ ಆಫೀಸ್‌ನಲ್ಲಿ ಭರ್ಜರಿ ಪ್ರದರ್ಶನ ಮುಂದುವರಿಸಿದ್ದು, ಬಿಡುಗಡೆಯಾದ ಮೊದಲ ಏಳು ದಿನಗಳಲ್ಲಿಯೇ ₹934.55 ಕೋಟಿ ಗಳಿಸುವ ಮೂಲಕ ಭಾರತೀಯ ಚಿತ್ರರಂಗದಲ್ಲಿ ಹೊಸ ಸಂಚಲನ ಸೃಷ್ಟಿಸಿದೆ.

ನಿತೇಶ್ ತಿವಾರಿ ನಿರ್ದೇಶನದ ಈ ಪೌರಾಣಿಕ ಮಹಾಕಾವ್ಯ ಆಧಾರಿತ ಚಿತ್ರವು ನವೆಂಬರ್ 5ರಂದು ವಿಶ್ವದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಿತ್ತು. ದೀಪಾವಳಿ ಹಬ್ಬದ ಸಂದರ್ಭದಲ್ಲಿ ತೆರೆಕಂಡ ಚಿತ್ರಕ್ಕೆ ದೇಶೀಯ ಹಾಗೂ ವಿದೇಶಿ ಮಾರುಕಟ್ಟೆಗಳಲ್ಲಿ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಬಿಡುಗಡೆಯಾದ ಎಂಟನೇ ದಿನವೇ ₹1,000 ಕೋಟಿ ಗಳಿಕೆಯ ಮೈಲಿಗಲ್ಲನ್ನು ತಲುಪುವ ನಿರೀಕ್ಷೆ ಮೂಡಿಸಿದೆ.

ಚಿತ್ರವ್ಯಾಪಾರ ವಿಶ್ಲೇಷಣಾ ಸಂಸ್ಥೆ ಸ್ಯಾಕ್‌ನಿಲ್ಕ್ ವರದಿಯ ಪ್ರಕಾರ, ನವೆಂಬರ್ 11ರ ಅಂತ್ಯಕ್ಕೆ ರಾಮಾಯಣ ಭಾರತದ ಬಾಕ್ಸ್ ಆಫೀಸ್‌ನಲ್ಲಿ ₹511.10 ಕೋಟಿ ನಿವ್ವಳ ಗಳಿಕೆ ದಾಖಲಿಸಿದೆ. ತೆರೆಗೆ ಸೇರಿದಂತೆ ಭಾರತದ ಒಟ್ಟು ಗಳಿಕೆ ₹611.05 ಕೋಟಿಯಾಗಿದ್ದು, ವಿದೇಶಿ ಮಾರುಕಟ್ಟೆಗಳಿಂದ ₹323.50 ಕೋಟಿ ಸಂಗ್ರಹವಾಗಿದೆ. ಈ ಮೂಲಕ ಜಾಗತಿಕ ಒಟ್ಟು ಗಳಿಕೆ ₹934.55 ಕೋಟಿಗೆ ತಲುಪಿದೆ.

ಚಿತ್ರವು ₹1,000 ಕೋಟಿ ಗಡಿ ದಾಟಲು ಇನ್ನೂ ₹65.45 ಕೋಟಿ ಗಳಿಸಬೇಕಿದ್ದು, ಗುರುವಾರದ ಪ್ರದರ್ಶನಗಳು ಹಾಗೂ ವಿದೇಶಿ ಮಾರುಕಟ್ಟೆಗಳ ಆದಾಯದ ಆಧಾರದಲ್ಲಿ ಈ ಸಾಧನೆ ಸಾಧ್ಯವಾಗುವ ನಿರೀಕ್ಷೆಯಿದೆ.

ಮೊದಲ ದಿನ ಭಾರತದಲ್ಲಿ ₹64.85 ಕೋಟಿ ನಿವ್ವಳ ಗಳಿಕೆಯೊಂದಿಗೆ ಆರಂಭವಾದ ಚಿತ್ರವು ಎರಡನೇ ದಿನ ₹48.05 ಕೋಟಿ, ಮೂರನೇ ದಿನ ₹69.80 ಕೋಟಿ ಹಾಗೂ ನಾಲ್ಕನೇ ದಿನ ₹56.15 ಕೋಟಿ ಗಳಿಸಿತ್ತು. ದೀಪಾವಳಿ ನಂತರದ ಸೋಮವಾರ ಚಿತ್ರವು ₹107.50 ಕೋಟಿ ಗಳಿಸುವ ಮೂಲಕ ತನ್ನ ಅತ್ಯಧಿಕ ಏಕದಿನ ಗಳಿಕೆಯನ್ನು ದಾಖಲಿಸಿತು.

ಮಂಗಳವಾರ ₹94.10 ಕೋಟಿ ಹಾಗೂ ಬುಧವಾರ ₹70.65 ಕೋಟಿ ನಿವ್ವಳ ಗಳಿಕೆ ದಾಖಲಿಸಿದ ಚಿತ್ರವು ಏಳು ದಿನಗಳಲ್ಲಿಯೇ ಭಾರತದ ₹500 ಕೋಟಿ ನಿವ್ವಳ ಗಳಿಕೆಯ ಗಡಿಯನ್ನು ದಾಟಿದೆ.

ವಿದೇಶಗಳಲ್ಲಿಯೂ ಚಿತ್ರವು ಗಮನಾರ್ಹ ಪ್ರದರ್ಶನ ನೀಡುತ್ತಿದೆ. ಏಳನೇ ದಿನವೊಂದರಲ್ಲಿಯೇ ವಿದೇಶಿ ಮಾರುಕಟ್ಟೆಯಿಂದ ಸುಮಾರು ₹25 ಕೋಟಿ ಸಂಗ್ರಹವಾಗಿದ್ದು, ಒಟ್ಟು ವಿದೇಶಿ ಗಳಿಕೆ ₹323.50 ಕೋಟಿಗೆ ಏರಿಕೆಯಾಗಿದೆ. ಜಾಗತಿಕ ಒಟ್ಟು ಗಳಿಕೆಯಲ್ಲಿ ವಿದೇಶಿ ಮಾರುಕಟ್ಟೆಯ ಪಾಲು ಸುಮಾರು ಶೇ.34.6ರಷ್ಟಿದೆ.

ಕನ್ನಡ ಆವೃತ್ತಿಗೂ ಭರ್ಜರಿ ಪ್ರತಿಕ್ರಿಯೆ ವ್ಯಕ್ತವಾಗಿದೆ. ಮೊದಲ ಏಳು ದಿನಗಳಲ್ಲಿ ಹಿಂದಿ ಆವೃತ್ತಿ ಭಾರತದಲ್ಲಿ ₹394 ಕೋಟಿ ನಿವ್ವಳ ಗಳಿಕೆ ದಾಖಲಿಸಿದರೆ, ಕನ್ನಡಕ್ಕೆ ಡಬ್ ಆಗಿರುವ ಆವೃತ್ತಿ ₹45.70 ಕೋಟಿ ಗಳಿಸಿದೆ. ತೆಲುಗು ಆವೃತ್ತಿ ₹35.75 ಕೋಟಿ, ತಮಿಳು ಆವೃತ್ತಿ ₹20 ಕೋಟಿ ಹಾಗೂ ಮಲಯಾಳಂ ಆವೃತ್ತಿ ₹15.65 ಕೋಟಿ ಗಳಿಸಿವೆ.

ಹಿಂದಿ ನಂತರ ಅತಿ ಹೆಚ್ಚು ಗಳಿಕೆ 2ನೇ ಪುಟಕ್ಕೆ

ಮೋದಿ ಹೆಸರು ಕೇಳಿದರೆ ಬಿಜೆಪಿ ನಾಯಕರಿಗೆ ಮಾತೇ ಹೊರಡುವುದಿಲ್ಲ: ಪ್ರಿಯಾಂಕ್ ಖರ್ಗೆ ವ್ಯಂಗ್ಯ



ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ಅವರ ಹೆಸರು ಕೇಳಿದ ಕೂಡಲೇ ರಾಜ್ಯ ಬಿಜೆಪಿ ನಾಯಕರು ಭಯದಿಂದ ಮೌನಕ್ಕೆ ಶರಣಾಗುತ್ತಾರೆ. ರಾಜ್ಯಕ್ಕೆ ಅನ್ಯಾಯವಾದರೂ ಕೇಂದ್ರ ಸರ್ಕಾರದ ವಿರುದ್ಧ ಧ್ವನಿ ಎತ್ತುವ ಧೈರ್ಯ ಅವರಿಗಿಲ್ಲ ಎಂದು ಗ್ರಹ ಸಚಿವ ಪ್ರಿಯಾಂಕ್ ಖರ್ಗೆ ಬಿಜೆಪಿ ನಾಯಕರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಹಿತಾಸಕ್ತಿಗೆ ಸಂಬಂಧಿಸಿದ ವಿಚಾರಗಳಲ್ಲಿ ಬಿಜೆಪಿ ನಾಯಕರು ಕೇವಲ ಟೀಕೆ ಮಾಡುವುದನ್ನು ಬಿಟ್ಟು ನಮ್ಮೊಂದಿಗೆ ಕೈಜೋಡಿಸಬೇಕು. ರಾಜ್ಯಕ್ಕೆ ಅಗತ್ಯವಿರುವ ನೆರವು ಹಾಗೂ ಬೇಡಿಕೆಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರ ಬಳಿಗೆ ಒಟ್ಟಾಗಿ ತೆರಳಿ ಪ್ರಸ್ತಾವನೆ ಸಲ್ಲಿಸೋಣ ಎಂದು ಸವಾಲು ಹಾಕಿದರು.

ಬಿಜೆಪಿ ನಾಯಕರು ರಾಜ್ಯ ಸರ್ಕಾರದ ವಿರುದ್ಧ ನಿರಂತರ ಆರೋಪ ಮಾಡುತ್ತಿದ್ದಾರೆ. ಆದರೆ ರಾಜ್ಯದ ಸಮಸ್ಯೆಗಳನ್ನು ಪ್ರಧಾನಿ ಮುಂದೆ ಪ್ರಸ್ತಾಪಿಸುವ ಸಂದರ್ಭ ಬಂದಾಗ ಮೌನ ವಹಿಸುತ್ತಾರೆ. ಮೋದಿ ಅವರ ಹೆಸರು ಕೇಳಿದ ಕೂಡಲೇ ನಡುಗುವ ಬಿಜೆಪಿ ನಾಯಕರಿಗೆ ಕೇಂದ್ರ ಸರ್ಕಾರವನ್ನು ಪ್ರಶ್ನಿಸುವ ಧೈರ್ಯವಿಲ್ಲ ಎಂದು ಟೀಕಿಸಿದರು.

ರಾಜ್ಯಕ್ಕೆ ಎಷ್ಟೇ ಅನ್ಯಾಯವಾದರೂ ಪ್ರಧಾನಿ ಮೋದಿ ಅವರನ್ನು ಹೊಗಳುವುದನ್ನು ಬಿಜೆಪಿ ನಾಯಕರು ನಿಲ್ಲಿಸುವುದಿಲ್ಲ. ಜನರ ಹಿತಾಸಕ್ತಿಗಿಂತ ಪ್ರಧಾನಿ ಮೇಲಿನ ನಿಷ್ಠೆಯೇ ಅವರಿಗೆ ಮುಖ್ಯವಾಗಿದೆ. ತಮ್ಮ ಪ್ರಾಣ ಹೋದರೂ ಮೋದಿ ಹೈ ತೋ ಮುಮ್ಕಿನ್ ಹೈ ಎಂಬ ಘೋಷಣೆಯನ್ನು ಕೂಗುತ್ತಲೇ ಇರುತ್ತಾರೆ ಎಂದು ವ್ಯಂಗ್ಯವಾಡಿದರು.

ರಾಜ್ಯ ಸರ್ಕಾರದ ಖಜಾನೆ ಖಾಲಿಯಾಗಿದೆ ಎಂಬ ಬಿಜೆಪಿ ನಾಯಕರ ಆರೋಪಕ್ಕೂ ಪ್ರತಿಕ್ರಿಯಿಸಿದ ಅವರು, ಬಿಜೆಪಿ ನಾಯಕರ ನಿಲುವುಗಳು ಪರಸ್ಪರ ವಿರೋಧಾಭಾಸಗಳಿಂದ ಕೂಡಿವೆ. ರಾಜ್ಯದಲ್ಲಿ ಹಾಲಿನ ದರ ಏರಿಕೆಯಾದರೆ ಪ್ರತಿಭಟನೆ ನಡೆಸುವ ಬಿಜೆಪಿ ನಾಯಕರು, ಮಹಾರಾಷ್ಟ್ರದಲ್ಲಿ ಅಮೂಲ್ ಹಾಲಿನ ದರ ಹೆಚ್ಚಳವಾದಾಗ ಏಕೆ ಪ್ರಶ್ನಿಸುವುದಿಲ್ಲ ಎಂದು ಕೇಳಿದರು.

ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ವಿಚಾರದಲ್ಲಿ ಬಿಜೆಪಿ ನಾಯಕರು ಏಕೆ ಮೌನ ವಹಿಸಿದ್ದಾರೆ? ಕಳೆದ 13 ವರ್ಷಗಳಲ್ಲಿ ಅಗತ್ಯ ವಸ್ತುಗಳ ಬೆಲೆ ಎಷ್ಟರಮಟ್ಟಿಗೆ ಏರಿಕೆಯಾಗಿದೆ ಎಂಬುದರ ಕುರಿತು ಅವರು ಮಾತನಾಡುವುದಿಲ್ಲವೇ? 2ನೇ ಪುಟಕ್ಕೆ

ದೌರ್ಜನ್ಯ ನಿಯಂತ್ರಿಸುವುದು ಪ್ರತಿಯೊಬ್ಬರ ಜವಾಬ್ದಾರಿ: ಜಿಲ್ಲಾಧಿಕಾರಿ ಪೂವಿತಾ ಎಸ್.



ರಾಯಚೂರು, ನ.12 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಮೇಲಿನ ದೌರ್ಜನ್ಯಗಳನ್ನು ನಿಯಂತ್ರಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಈ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.

ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜಾಗೃತಿ ಹಾಗೂ ಉಸ್ತುವಾರಿ (ದೌರ್ಜನ್ಯ ನಿಯಂತ್ರಣ) ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ಇಲಾಖೆಗಳು ಹಾಗೂ ಅಭಿವೃದ್ಧಿ ನಿಗಮಗಳ ಮೂಲಕ ಸಾರ್ವಜನಿಕರಿಗೆ ಲಭ್ಯವಿರುವ ಸೌಲಭ್ಯಗಳ ಕುರಿತು ವ್ಯಾಪಕ ಜಾಗೃತಿ ಮೂಡಿಸಬೇಕು. ಅಧಿಕಾರಿಗಳು ತಮಗೆ ನಿಗದಿಪಡಿಸಿರುವ ಗುರಿಗಳನ್ನು ನಿಗದಿತ ಅವಧಿಯೊಳಗೆ ಸಾಧಿಸಬೇಕು. ಸಮಿತಿಯು ಶಿಫಾರಸು ಮಾಡಿರುವ ಫಲಾನುಭವಿಗಳ ಪಟ್ಟಿಯನ್ನು ಅಂತಿಮಗೊಳಿಸಬೇಕು ಎಂದು ಸೂಚಿಸಿದರು.

ಪರಿಶಿಷ್ಟ ಜಾತಿ ಉಪಯೋಜನೆ (ಎಸ್‌ಸಿಪಿ) ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆ (ಟಿಎಸ್‌ಪಿ) ಅಡಿಯಲ್ಲಿ ಒದಗಿಸಲಾಗುವ ವಸತಿ, ಶಿಕ್ಷಣ ಮತ್ತು ವೈದ್ಯಕೀಯ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪುವಂತೆ ನೋಡಿಕೊಳ್ಳಬೇಕು. ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ದೌರ್ಜನ್ಯ ಪ್ರಕರಣಗಳಲ್ಲಿ ನೊಂದ ಸಂತ್ರಸ್ತರಿಗೆ ಸರ್ಕಾರದಿಂದ ದೊರೆಯಬೇಕಾದ ಪರಿಹಾರ ಧನ ವಿತರಣೆಯಲ್ಲಿ ಅನಗತ್ಯ ವಿಳಂಬವಾಗಬಾರದು. 2ನೇ ಪುಟಕ್ಕೆ

ವಾಲ್ಮೀಕಿ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾಗಿ ಡಾ. ವಿರುಪಾಕ್ಷಯ್ಯ ಅಧಿಕಾರ ಸ್ವೀಕಾರ



ರಾಯಚೂರು: ಹೊಸ ರಾಷ್ಟ್ರೀಯ ಶಿಕ್ಷಣ ನೀತಿಗೆ ಅನುಗುಣವಾಗಿ ವಿಶ್ವವಿದ್ಯಾಲಯದ ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ ತರುವುದರ ಜೊತೆಗೆ ಪರೀಕ್ಷಾ ಕಾರ್ಯಗಳನ್ನು ತ್ವರಿತವಾಗಿ ಹಾಗೂ ಗುಣಮಟ್ಟದಿಂದ ನಿರ್ವಹಿಸಲು ಮೊದಲ ಆದ್ಯತೆ ನೀಡಲಾಗುವುದು ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ನೂತನ ಮೌಲ್ಯಮಾಪನ ಕುಲಸಚಿವ ಡಾ. ವಿರುಪಾಕ್ಷಯ್ಯ ಡಿಬಿಎಂ ತಿಳಿಸಿದರು.

ನಗರದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಪರೀಕ್ಷಾಂಗ ಕಚೇರಿಯಲ್ಲಿ ಬುಧವಾರ ಕಡತಕ್ಕೆ ಸಹಿ ಹಾಕುವ ಮೂಲಕ ಅವರು ಮೌಲ್ಯಮಾಪನ ವಿಭಾಗದ ಕುಲಸಚಿವರಾಗಿ ಅಧಿಕೃತವಾಗಿ ಅಧಿಕಾರ ಸ್ವೀಕರಿಸಿದರು.

ಈ ಹಿಂದೆ ದಾವಣಗೆರೆ ವಿಶ್ವವಿದ್ಯಾಲಯದ ಸೂಕ್ಷ್ಮಜೀವಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದ ಡಾ. ವಿರುಪಾಕ್ಷಯ್ಯ ಅವರು, ಅಧಿಕಾರ ಸ್ವೀಕಾರದ ಬಳಿಕ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಪರೀಕ್ಷಾ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲಾಗುವುದು ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹಾಗೂ ನೈತಿಕ ಸ್ಥೈರ್ಯ ಬೆಳೆಸುವುದರ ಜೊತೆಗೆ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯ ಪದವಿ ಕಾಲೇಜುಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಶ್ರಮಿಸಲಾಗುವುದು. ವಿಶ್ವವಿದ್ಯಾಲಯದ ಸರ್ವಾಂಗೀಣ ಅಭಿವೃದ್ಧಿಗೆ ಅಗತ್ಯ ಸಹಕಾರ ಮತ್ತು ಪ್ರೋತ್ಸಾಹ ನೀಡಲಾಗುವುದು ಎಂದು ತಿಳಿಸಿದರು.

ಹೊಸ ಶಿಕ್ಷಣ ನೀತಿಯ ಆಶಯಗಳಿಗೆ ಅನುಗುಣವಾಗಿ ಪ್ರವೇಶಾತಿ, ಆಡಳಿತ ಹಾಗೂ ಪರೀಕ್ಷಾ ವಿಭಾಗಗಳಲ್ಲಿ ಸಮಗ್ರ ಸುಧಾರಣೆ ತರಲು ಪ್ರಯತ್ನಿಸಲಾಗುವುದು. ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಪರೀಕ್ಷಾ ಪ್ರಕ್ರಿಯೆಗಳನ್ನು ಸುಗಮಗೊಳಿಸಲು ಆದ್ಯತೆ ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಿವಾನಂದ ಕೆಳಗಿನಮನಿ ಅವರು ನೂತನ 2ನೇ ಪುಟಕ್ಕೆ

ಅಕ್ಕ ಕೆಫೆಗಳ ಸ್ಥಾಪನೆಯಲ್ಲಿ ರಾಜ್ಯಕ್ಕೆ ರಾಯಚೂರು ಪ್ರಥಮ: ಜಿಪಂ ಸಿಇಒ ಈಶ್ವರ್ ಕಾಂದೂಗೆ ಪ್ರಶಂಸನಾ ಪತ್ರ



ರಾಯಚೂರು, ನ.11: ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ (DAY-NRLM) ಅಕ್ಕ ಕೆಫೆಗಳ ಸ್ಥಾಪನೆ ಮತ್ತು ಅನುಷ್ಠಾನದಲ್ಲಿ ರಾಯಚೂರು ಜಿಲ್ಲೆ ರಾಜ್ಯದಲ್ಲಿಯೇ ಪ್ರಥಮ ಸ್ಥಾನ ಪಡೆದುಕೊಂಡಿದ್ದು, ಈ ಸಾಧನೆಗಾಗಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಅವರಿಗೆ ರಾಜ್ಯಮಟ್ಟದ ಪ್ರಶಂಸೆ ವ್ಯಕ್ತವಾಗಿದೆ.

ಜಿಲ್ಲೆಯ ವಿವಿಧೆಡೆ ಒಟ್ಟು ಎಂಟು ಅಕ್ಕ ಕೆಫೆಗಳನ್ನು ಯಶಸ್ವಿಯಾಗಿ ಸ್ಥಾಪಿಸುವ ಮೂಲಕ ರಾಜ್ಯದಲ್ಲಿಯೇ ಅತಿ ಹೆಚ್ಚು ಅಕ್ಕ ಕೆಫೆಗಳನ್ನು ಅನುಷ್ಠಾನಗೊಳಿಸಿದ ಜಿಲ್ಲೆಯೆಂಬ ಹೆಗ್ಗಳಿಕೆಗೆ ರಾಯಚೂರು ಪಾತ್ರವಾಗಿದೆ.

ಈ ಸಾಧನೆಯನ್ನು ಗುರುತಿಸಿರುವ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದ ನಿರ್ದೇಶಕಿ ವಾಸಿರೆಡ್ಡಿ ವಿಜಯ ಜ್ಯೋತ್ಸ್ನಾ (ಐಎಎಸ್) ಅವರು ಜಿಲ್ಲಾ ಪಂಚಾಯಿತಿ ಸಿಇಒ ಈಶ್ವರ್ ಕಾಂದೂ (ಐಎಎಸ್) ಅವರಿಗೆ ಪ್ರಶಂಸನಾ ಪತ್ರ ನೀಡಿ ಅಭಿನಂದಿಸಿದ್ದಾರೆ.

ಗ್ರಾಮೀಣ ಭಾಗದ ಸ್ವಸಹಾಯ ಸಂಘಗಳ ಮಹಿಳೆಯರಿಗೆ ಕೃಷಿಯೇತರ ಚಟುವಟಿಕೆಗಳಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು, ಸ್ವಂತ ಉದ್ಯಮ ಆರಂಭಿಸಲು ಪ್ರೋತ್ಸಾಹಿಸುವುದು ಹಾಗೂ ಆರ್ಥಿಕ ಸ್ವಾವಲಂಬನೆ ಸಾಧಿಸಲು ನೆರವಾಗುವುದು ಅಕ್ಕ ಕೆಫೆ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ರಾಯಚೂರು ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ಸಹಭಾಗಿತ್ವ ಹಾಗೂ ಸ್ವಸಹಾಯ ಸಂಘಗಳ ಸಹಕಾರದೊಂದಿಗೆ ಅಕ್ಕ ಕೆಫೆಗಳನ್ನು ಆರಂಭಿಸಿರುವುದು ಮಹಿಳಾ ಉದ್ಯಮಶೀಲತೆಗೆ ಹೊಸ ಅವಕಾಶಗಳನ್ನು ಕಲ್ಪಿಸಿದೆ. ಗ್ರಾಮೀಣ ಮಹಿಳೆಯರು ಸ್ವಂತ ಉದ್ಯಮ ನಿರ್ವಹಿಸುವ ಮೂಲಕ ಆದಾಯ ಗಳಿಸಲು ಹಾಗೂ ಆರ್ಥಿಕವಾಗಿ ಸಬಲರಾಗಲು ಈ ಯೋಜನೆ ಸಹಕಾರಿಯಾಗಿದೆ ಎಂದು ಅಭಿಯಾನ ನಿರ್ದೇಶಕರು ಪ್ರಶಂಸನಾ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಅವರ ಮಾರ್ಗದರ್ಶನದಲ್ಲಿ ಜಿಲ್ಲಾ ಅಭಿಯಾನ ನಿರ್ವಹಣಾ ಘಟಕ, ಪಂಚಾಯಿತಿ ಅಧಿಕಾರಿಗಳು, ಸಿಬ್ಬಂದಿ, ಸ್ವಸಹಾಯ ಸಂಘಗಳು ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳು ಸಮನ್ವಯದಿಂದ ಕಾರ್ಯನಿರ್ವಹಿಸಿರುವುದು ಈ ಸಾಧನೆಗೆ ಕಾರಣವಾಗಿದೆ 2ನೇ ಪುಟಕ್ಕೆ

ಬುದ್ಧ ಮತ್ತು ಅಂಬೇಡ್ಕರ್ ಅವರ ಚಿಂತನೆಗಳು ಇಂದಿಗೂ ಪ್ರಸ್ತುತ: ಪ್ರೊ. ಎಚ್.ಟಿ. ಪೋತೆ




ರಾಯಚೂರು, ನ.12: ಬುದ್ಧನ ತತ್ವಗಳು ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಸಾಮಾಜಿಕ ಮತ್ತು ವೈಚಾರಿಕ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿದ್ದು, ಸಮಾನತೆ, ಮಾನವೀಯತೆ ಮತ್ತು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಲು ಅವರ ವಿಚಾರಧಾರೆಗಳನ್ನು ಅಧ್ಯಯನ ಮಾಡುವುದು ಅಗತ್ಯವಾಗಿದೆ ಎಂದು ಕಲಬುರಗಿಯ ಗುಲಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ. ಎಚ್.ಟಿ. ಪೋತೆ ಅಭಿಪ್ರಾಯಪಟ್ಟರು.

ಕಲಬುರಗಿಯ ಪಾಲಿ ಇನ್‌ಸ್ಟಿಟ್ಯೂಟ್ ಹಾಗೂ ರಾಯಚೂರಿನ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ವರ್ಷಾಚರಣೆ ಅಂಗವಾಗಿ ಗುರುವಾರ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ ಬುದ್ಧ ಮತ್ತು ಆತನ ಧಮ್ಮ ಕೃತಿ ಕುರಿತ ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೈಜ್ಞಾನಿಕ ದೃಷ್ಟಿಕೋನ ಹೊಂದಿರುವ ಪ್ರತಿಯೊಬ್ಬರೂ ಬೌದ್ಧ ಧರ್ಮದ ತತ್ವಗಳನ್ನು ಅಧ್ಯಯನ ಮಾಡಬೇಕು. ಅಂಬೇಡ್ಕರ್ ಅವರು ಬುದ್ಧನ ವಿಚಾರಗಳನ್ನು ಆಳವಾಗಿ ಅಧ್ಯಯನ ಮಾಡಿ, ಅವುಗಳ ಸಾಮಾಜಿಕ ಮಹತ್ವವನ್ನು ಜನಸಾಮಾನ್ಯರಿಗೆ ಪರಿಚಯಿಸಿದ್ದಾರೆ. ಬುದ್ಧ ಮತ್ತು ಆತನ ಧಮ್ಮ ಕೃತಿಯು ಕೇವಲ ಬೌದ್ಧ ಧರ್ಮಕ್ಕೆ ಸೀಮಿತವಾಗದೆ ಎಲ್ಲ ಸಮುದಾಯಗಳ ಜನರು ಓದಬೇಕಾದ ಮಹತ್ವದ ಗ್ರಂಥವಾಗಿದೆ. ಇದು ವೈಚಾರಿಕ ಹಾಗೂ ಸಾಮಾಜಿಕ ಪರಿವರ್ತನೆಗೆ ಮಾರ್ಗದರ್ಶಿಯಾಗಿದೆ ಎಂದು ಹೇಳಿದರು.

ಎಲ್ಲ ಧರ್ಮಗಳನ್ನು ಗೌರವಿಸುವ ಮನೋಭಾವ ಬೆಳೆಸಿಕೊಂಡಾಗ ಮಾತ್ರ ನಿಜವಾದ ಭಾರತೀಯತೆಯ ಮೌಲ್ಯಗಳನ್ನು ಅರ್ಥಮಾಡಿಕೊಳ್ಳಲು ಸಾಧ್ಯ. ವಿದ್ಯಾರ್ಥಿಗಳು ಉತ್ತಮ ಪುಸ್ತಕಗಳನ್ನು 2ನೇ ಪುಟಕ್ಕೆ

ಜನಜಾತಿಯ ಗೌರವ ದಿವಸ: ನ.14ರಂದು ದೀಪ ಬೆಳಗಿಸುವ ಹಾಗೂ ಸ್ವಚ್ಛತಾ ಅಭಿಯಾನ



ರಾಯಚೂರು, ನ.12: ಆದಿವಾಸಿ ಸಮುದಾಯಗಳ ಐತಿಹಾಸಿಕ ಹೋರಾಟ, ಸಾಂಸ್ಕೃತಿಕ ಪರಂಪರೆ ಹಾಗೂ ದೇಶದ ಅಭಿವೃದ್ಧಿಗೆ ನೀಡಿರುವ ಕೊಡುಗೆಗಳನ್ನು ಸ್ಮರಿಸುವ ಉದ್ದೇಶದಿಂದ ಜನಜಾತಿಯ ಗೌರವ ದಿವಸದ ಅಂಗವಾಗಿ ನವೆಂಬರ್ 14ರಂದು ನಗರದ ಪ್ರಮುಖ ವೃತ್ತಗಳಲ್ಲಿ ದೀಪ ಬೆಳಗಿಸುವ ಹಾಗೂ ಸ್ವಚ್ಛತಾ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ಎಸ್‌ಟಿ ಮೋರ್ಚಾದ ರಾಜ್ಯ ಕಾರ್ಯದರ್ಶಿ ರೂಪಾ ಶ್ರೀನಿವಾಸ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬುಡಕಟ್ಟು ಸಮುದಾಯಗಳ ವಿಶಿಷ್ಟ ಜೀವನಶೈಲಿ, ಭಾಷೆ, ಕಲೆ, ಸಂಪ್ರದಾಯ ಹಾಗೂ ಪ್ರಕೃತಿಯೊಂದಿಗೆ ಹೊಂದಿರುವ ನಿಕಟ ಸಂಬಂಧವು ಭಾರತದ ಸಾಂಸ್ಕೃತಿಕ ವೈವಿಧ್ಯತೆಯ ಪ್ರಮುಖ ಭಾಗವಾಗಿದೆ. ಈ ಪರಂಪರೆಯನ್ನು ಸಂರಕ್ಷಿಸುವುದರ ಜೊತೆಗೆ ಮುಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ ಎಂದು ಹೇಳಿದರು.

ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಆದಿವಾಸಿ ಸಮುದಾಯಗಳ ಅನೇಕ ಹೋರಾಟಗಾರರು ಮಹತ್ವದ ಪಾತ್ರ ವಹಿಸಿದ್ದಾರೆ. ಅವರ ತ್ಯಾಗ, ಬಲಿದಾನ ಹಾಗೂ ದೇಶಪ್ರೇಮವನ್ನು ಗೌರವಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಪ್ರತಿವರ್ಷ ನವೆಂಬರ್ 15ರಂದು ಜನಜಾತಿಯ ಗೌರವ ದಿವಸ ಆಚರಿಸಲು ಘೋಷಿಸಿದೆ ಎಂದು ತಿಳಿಸಿದರು.

ಈ ದಿನಾಚರಣೆಯ ಹಿನ್ನೆಲೆಯಲ್ಲಿ ನವೆಂಬರ್ 14ರಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತ, ಮಹರ್ಷಿ ವಾಲ್ಮೀಕಿ ವೃತ್ತ ಸೇರಿದಂತೆ ವಿವಿಧ ಪ್ರಮುಖ ವೃತ್ತಗಳಲ್ಲಿ ದೀಪಗಳನ್ನು ಬೆಳಗಿಸಲಾಗುವುದು. ಇದೇ ಸಂದರ್ಭದಲ್ಲಿ ಸ್ವಚ್ಛತಾ ಕಾರ್ಯಕ್ರಮಗಳನ್ನು ನಡೆಸುವ ಮೂಲಕ ಸಾರ್ವಜನಿಕರಲ್ಲಿ ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆಯ ಮಹತ್ವದ ಕುರಿತು ಅರಿವು ಮೂಡಿಸಲಾಗುವುದು ಎಂದರು.

ನವೆಂಬರ್ 15ರಂದು ನಗರದ ವಾಲ್ಮೀಕಿ ಭವನದಲ್ಲಿ ಜನಜಾತಿಯ ಗೌರವ ದಿವಸವನ್ನು ಸಂಭ್ರಮದಿಂದ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಬುಡಕಟ್ಟು ಸಮುದಾಯಗಳ ಇತಿಹಾಸ, ಸ್ವಾತಂತ್ರ್ಯ ಹೋರಾಟದಲ್ಲಿನ 2ನೇ ಪುಟಕ್ಕೆ

ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆ ಪರಿಷ್ಕರಣೆ: ಆಕ್ಷೇಪಣೆ ಸಲ್ಲಿಸಲು ಅವಕಾಶ

ರಾಯಚೂರು, ನ.12 (ಕರ್ನಾಟಕ ವಾರ್ತೆ): ರಾಯಚೂರು ಹಿರಿಯ ಉಪನೋಂದಣಿ ಕಚೇರಿ ವ್ಯಾಪ್ತಿಗೆ ಒಳಪಡುವ ನಗರ, ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆಯನ್ನು 2026-27ನೇ ಸಾಲಿನಿಂದ ಜಾರಿಗೆ ಬರುವಂತೆ ಪರಿಷ್ಕರಿಸಲಾಗಿದ್ದು, ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ನವೆಂಬರ್ 7ರಂದು ನಡೆದ ಮಾರುಕಟ್ಟೆ ಮೌಲ್ಯ ನಿರ್ಧರಣಾ ಉಪಸಮಿತಿ ಸಭೆಯಲ್ಲಿ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆಗಳನ್ನು ಪರಿಶೀಲಿಸಿ, ಪರಿಷ್ಕೃತ ಬೆಲೆ ಪಟ್ಟಿಯನ್ನು ನಿರ್ಧರಿಸಲಾಗಿದೆ.

ಪರಿಷ್ಕೃತ ಮಾರ್ಗಸೂಚಿ ಬೆಲೆಗಳ ಕರಡು ಪಟ್ಟಿಯನ್ನು ಸಾರ್ವಜನಿಕರ ಮಾಹಿತಿ ಹಾಗೂ ಆಕ್ಷೇಪಣೆಗಳಿಗಾಗಿ ರಾಯಚೂರು ಹಿರಿಯ ಉಪನೋಂದಣಿ ಕಚೇರಿಯಲ್ಲಿ ಪ್ರಕಟಿಸಲಾಗಿದೆ.

ಈ ಬೆಲೆಗಳ ಕುರಿತು ಸಾರ್ವಜನಿಕರಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗೆ ಸಂಬಂಧಪಟ್ಟ ಉಪನೋಂದಣಾಧಿಕಾರಿಗಳಿಗೆ ಲಿಖಿತವಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಸಾರ್ವಜನಿಕರು ಕರಡು ಬೆಲೆ ಪಟ್ಟಿಯನ್ನು ಪರಿಶೀಲಿಸಿ, ಆಕ್ಷೇಪಣೆಗಳಿದ್ದಲ್ಲಿ ನಿಗದಿತ ಅವಧಿಯೊಳಗೆ ಸಲ್ಲಿಸಬೇಕು ಎಂದು ಸ್ಥಿರಾಸ್ತಿ ಮೌಲ್ಯಮಾಪನ ಉಪಸಮಿತಿಯ ಉಪನೋಂದಣಾಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗೃಹರಕ್ಷಕ ದಳದ 54 ಸ್ವಯಂಸೇವಕ ಸದಸ್ಯ ಸ್ಥಾನಗಳಿಗೆ ಅರ್ಜಿ ಆಹ್ವಾನ

ರಾಯಚೂರು, ನ.12 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ಗೃಹರಕ್ಷಕ ದಳದ ವಿವಿಧ ಘಟಕಗಳಲ್ಲಿ ಖಾಲಿ ಇರುವ ಒಟ್ಟು 54 ಸ್ವಯಂಸೇವಕ ಗೃಹರಕ್ಷಕ ಸದಸ್ಯ ಸ್ಥಾನಗಳಿಗೆ ನೋಂದಣಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಗೃಹರಕ್ಷಕ ದಳದ ಸೇವೆಯು ನಿಷ್ಕಾಮ ಸ್ವಯಂಸೇವೆಯಾಗಿದ್ದು, ಯಾವುದೇ ರೀತಿಯ ಮಾಸಿಕ ವೇತನ ಇರುವುದಿಲ್ಲ. ಜಿಲ್ಲೆಯ ರಾಯಚೂರು ನಗರ, ದೇವದುರ್ಗ, ಸಿಂಧನೂರು, ಮಾನ್ವಿ, ಲಿಂಗಸುಗೂರು, ಮಸ್ಕಿ, ಶಕ್ತಿನಗರ ಹಾಗೂ ಹಟ್ಟಿ ಘಟಕಗಳು ಸೇರಿದಂತೆ ಜಿಲ್ಲೆಯ ಎಲ್ಲ ತಾಲೂಕುಗಳ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತ ಅಭ್ಯರ್ಥಿಗಳು ರಾಯಚೂರು ನಗರದ ನಿಜಲಿಂಗಪ್ಪ ಕಾಲೋನಿಯ ಪ್ರಥಮ ದರ್ಜೆ ಕಾಲೇಜು ಸಮೀಪದಲ್ಲಿರುವ ಜಿಲ್ಲಾ ಗೃಹರಕ್ಷಕ ದಳದ ಕಚೇರಿಯಲ್ಲಿ ಅರ್ಜಿ ನಮೂನೆಗಳನ್ನು ಪಡೆದು, ನವೆಂಬರ್ 30ರೊಳಗೆ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಬೇಕು.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ರಾಯಚೂರು ಜಿಲ್ಲೆಯ ವ್ಯಾಪ್ತಿಗೆ ಒಳಪಟ್ಟವರಾಗಿರಬೇಕು. 19ರಿಂದ 50 ವರ್ಷ ವಯೋಮಿತಿಯೊಳಗಿದ್ದು, ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿರಬೇಕು. ಅಲ್ಲದೆ, ಮಾನಸಿಕ ಹಾಗೂ ದೈಹಿಕವಾಗಿ ಸದೃಢರಾಗಿರಬೇಕು.

ಅರ್ಜಿಯೊಂದಿಗೆ ವಯಸ್ಸಿನ ದೃಢೀಕರಣಕ್ಕಾಗಿ ಶಾಲಾ ವರ್ಗಾವಣೆ ಪ್ರಮಾಣಪತ್ರ (ಟಿ.ಸಿ.), ವಿಳಾಸದ ದೃಢೀಕರಣಕ್ಕಾಗಿ ಆಧಾರ್ ಕಾರ್ಡ್‌ನ ಜೆರಾಕ್ಸ್ ಪ್ರತಿ, ನಾಲ್ಕು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು ಹಾಗೂ ಮಾನಸಿಕ ಮತ್ತು ದೈಹಿಕ ಸದೃಢತೆಯನ್ನು ದೃಢೀಕರಿಸುವ ವೈದ್ಯಕೀಯ ಪ್ರಮಾಣಪತ್ರವನ್ನು ಲಗತ್ತಿಸಬೇಕು.

ಇದರೊಂದಿಗೆ ಸ್ವವಿಳಾಸ ಬರೆದಿರುವ ಅಂಚೆ ಲಕೋಟೆಯನ್ನೂ ಸಲ್ಲಿಸಬೇಕು. ಅಭ್ಯರ್ಥಿಗಳು ಖುದ್ದಾಗಿ ಜಿಲ್ಲಾ ಗೃಹರಕ್ಷಕ ದಳದ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಗೃಹರಕ್ಷಕ ದಳದ ಕಚೇರಿಯ ದೂರವಾಣಿ ಸಂಖ್ಯೆ 08532-221679ಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಗೃಹರಕ್ಷಕ ದಳದ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನ.16ರಿಂದ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಜೆಸ್ಕಾಂ ಗ್ರಾಹಕರ ಕುಂದುಕೊರತೆ ಸಭೆ

ರಾಯಚೂರು, ನ.12 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ವಿವಿಧ ಜೆಸ್ಕಾಂ ಉಪವಿಭಾಗಗಳ ವ್ಯಾಪ್ತಿಯಲ್ಲಿ ನವೆಂಬರ್ 16ರಿಂದ ಮೂರನೇ ತ್ರೈಮಾಸಿಕ ಗ್ರಾಹಕರ ಕುಂದುಕೊರತೆ ಸಭೆಗಳನ್ನು ಆಯೋಜಿಸಲಾಗಿದ್ದು, ವಿದ್ಯುತ್ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವಂತೆ ಜೆಸ್ಕಾಂ ಅಧಿಕಾರಿಗಳು ಕೋರಿದ್ದಾರೆ.

ಜೆಸ್ಕಾಂ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಸಭೆಗಳಲ್ಲಿ ಗ್ರಾಹಕರು ವಿದ್ಯುತ್ ಸರಬರಾಜು ಹಾಗೂ ಸೇವೆಗಳಿಗೆ ಸಂಬಂಧಿಸಿದ ಕುಂದುಕೊರತೆಗಳನ್ನು ಅಧಿಕಾರಿಗಳ ಗಮನಕ್ಕೆ ತರಬಹುದಾಗಿದೆ.

ನವೆಂಬರ್ 16ರಂದು ಬೆಳಿಗ್ಗೆ 10.30ಕ್ಕೆ ರಾಯಚೂರು ನಗರ ಉಪವಿಭಾಗ-1ರಲ್ಲಿ ಹಾಗೂ ಅದೇ ದಿನ ಮಧ್ಯಾಹ್ನ 3.30ಕ್ಕೆ ರಾಯಚೂರು ನಗರ ಉಪವಿಭಾಗ-2ರಲ್ಲಿ ಗ್ರಾಹಕರ ಕುಂದುಕೊರತೆ ಸಭೆಗಳು ನಡೆಯಲಿವೆ.

ಅದೇ ರೀತಿ, ನವೆಂಬರ್ 18ರಂದು ಬೆಳಿಗ್ಗೆ 10.30ಕ್ಕೆ ಮಸ್ಕಿ ಉಪವಿಭಾಗದಲ್ಲಿ ಹಾಗೂ ಮಧ್ಯಾಹ್ನ 3.30ಕ್ಕೆ ಲಿಂಗಸುಗೂರು ಉಪವಿಭಾಗದಲ್ಲಿ ಸಭೆಗಳನ್ನು ಹಮ್ಮಿಕೊಳ್ಳಲಾಗಿದೆ.

ಸಂಬಂಧಪಟ್ಟ ಉಪವಿಭಾಗಗಳ ವ್ಯಾಪ್ತಿಯ ವಿದ್ಯುತ್ ಗ್ರಾಹಕರು ನಿಗದಿತ ದಿನಾಂಕ ಮತ್ತು ಸಮಯದಲ್ಲಿ ಸಭೆಗಳಿಗೆ ಹಾಜರಾಗಿ ತಮ್ಮ ಕುಂದುಕೊರತೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಪಡೆದುಕೊಳ್ಳಬೇಕು ಎಂದು ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಮೃತ ವಾಣಿ

ಸೋಲನ್ನು ಗೆಲುವಾಗಿ ಬದಲಿಸುವ ಶಕ್ತಿ ಧೈರ್ಯಕ್ಕಿದೆ.



ರಾಮದುರ್ಗ ಗ್ರಾಪಂ ದೇವದುರ್ಗ ತಾಲೂಕಿಗೆ ಮರು ಸೇರ್ಪಡೆಗೆ ಆಗ್ರಹ: ನ.18ರಂದು ರಸ್ತೆ ತಡೆ ಪ್ರತಿಭಟನೆ



ದೇವದುರ್ಗ: ಸಾರ್ವಜನಿಕರ ಅಭಿಪ್ರಾಯ ಪಡೆಯದೆ ದೇವದುರ್ಗ ತಾಲೂಕಿನಿಂದ ಬೇರ್ಪಡಿಸಿ ನೂತನ ಅರಕೇರಾ ತಾಲೂಕಿಗೆ ಸೇರ್ಪಡೆಗೊಳಿಸಿರುವ ರಾಮದುರ್ಗ ಗ್ರಾಮ ಪಂಚಾಯಿತಿಯನ್ನು ಮರಳಿ ದೇವದುರ್ಗ ತಾಲೂಕಿನ ಗಟ್ಟೂರು ಹೋಬಳಿಗೆ ಸೇರಿಸಬೇಕು ಎಂದು ಒತ್ತಾಯಿಸಿ ನವೆಂಬರ್ 18ರಂದು ರಾಮದುರ್ಗ ಕ್ರಾಸ್‌ನಲ್ಲಿ ಬೃಹತ್ ರಸ್ತೆ ತಡೆ ಪ್ರತಿಭಟನೆ ನಡೆಸಲು ಗ್ರಾಮಸ್ಥರು ನಿರ್ಧರಿಸಿದ್ದಾರೆ.

ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿರುವ ರಾಮದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಸ್ಥರು, ಆಡಳಿತಾತ್ಮಕ ಅನುಕೂಲತೆ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ರಾಮದುರ್ಗ ಗ್ರಾಮ ಪಂಚಾಯಿತಿಯನ್ನು ದೇವದುರ್ಗ ತಾಲೂಕಿನಲ್ಲಿಯೇ ಮುಂದುವರಿಸಬೇಕು ಎಂದು ಆಗ್ರಹಿಸಿದ್ದಾರೆ.

ಈ ಹಿಂದೆ ದೇವದುರ್ಗ ತಾಲೂಕಿನ ಗಟ್ಟೂರು ಹೋಬಳಿ ವ್ಯಾಪ್ತಿಯಲ್ಲಿದ್ದ ರಾಮದುರ್ಗ ಗ್ರಾಮ ಪಂಚಾಯಿತಿ ಹಾಗೂ ಅದರ ವ್ಯಾಪ್ತಿಯ ಕಾಕರಗಲ್, ಸುಕೇಶ್ವರಹಾಳ್ ಮತ್ತು ಜಿನ್ನಾಪೂರು ಗ್ರಾಮಗಳನ್ನು ನೂತನ ಅರಕೇರಾ ತಾಲೂಕಿಗೆ ಸೇರ್ಪಡೆಗೊಳಿಸಲಾಗಿದೆ. ಆದರೆ ಈ ನಿರ್ಧಾರ ಕೈಗೊಳ್ಳುವ ಮೊದಲು ಸ್ಥಳೀಯ ಜನರ ಅಭಿಪ್ರಾಯವನ್ನು ಪರಿಗಣಿಸಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ರಾಮದುರ್ಗ ಸೇರಿದಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳು ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿದ್ದು, ದೇವದುರ್ಗ ತಾಲೂಕು ಕೇಂದ್ರ ಹಾಗೂ ಗಟ್ಟೂರು ಹೋಬಳಿ ಕೇಂದ್ರಗಳು ಸುಮಾರು 15ರಿಂದ 20 ಕಿ.ಮೀ. ವ್ಯಾಪ್ತಿಯಲ್ಲಿವೆ. ಈ ಭಾಗದ ರೈತರು, ವ್ಯಾಪಾರಸ್ಥರು ಹಾಗೂ ಸಾರ್ವಜನಿಕರು ತಮ್ಮ ದೈನಂದಿನ ವ್ಯವಹಾರ, ಕೃಷಿ ಚಟುವಟಿಕೆ ಮತ್ತು ಸರ್ಕಾರಿ ಕೆಲಸಗಳಿಗಾಗಿ ದೇವದುರ್ಗ ಹಾಗೂ ಗಟ್ಟೂರು ಕೇಂದ್ರಗಳನ್ನೇ ಅವಲಂಬಿಸಿದ್ದಾರೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಆದರೆ ಗ್ರಾಮ ಪಂಚಾಯಿತಿಯನ್ನು ಅರಕೇರಾ ತಾಲೂಕಿಗೆ ಸೇರ್ಪಡೆಗೊಳಿಸಿರುವುದರಿಂದ ಸರ್ಕಾರಿ ಕಚೇರಿಗಳಿಗೆ ತೆರಳಲು ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುವಂತಾಗಿದೆ. ಆಡಳಿತಾತ್ಮಕ ಕೆಲಸಗಳಿಗಾಗಿ ಹೆಚ್ಚಿನ ದೂರ ಪ್ರಯಾಣಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರಿಂದ ಸಮಯ ಹಾಗೂ ಹಣ ವ್ಯರ್ಥವಾಗುತ್ತಿದೆ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಸಮಸ್ಯೆಯನ್ನು ಪರಿಹರಿಸುವಂತೆ ಸರ್ಕಾರಕ್ಕೆ ಈಗಾಗಲೇ ಮನವಿ ಸಲ್ಲಿಸಲಾಗಿತ್ತು. ಮನವಿಗೆ ಸ್ಪಂದಿಸಿದ್ದ ರಾಜ್ಯ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ರಾಮದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಆಡಳಿತಾತ್ಮಕ ಸ್ಥಿತಿಗತಿ ಕುರಿತು ಸಮಗ್ರ ವರದಿ ಸಲ್ಲಿಸಲು ರಾಯಚೂರು ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದರು ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ರಾಮದುರ್ಗ, ಕಾಕರಗಲ್, ಸುಕೇಶ್ವರಹಾಳ್ ಹಾಗೂ ಜಿನ್ನಾಪೂರು ಗ್ರಾಮಗಳ ಸಾರ್ವಜನಿಕರ ಅಭಿಪ್ರಾಯ, ಪ್ರಸ್ತುತ ಹೋಬಳಿ ವ್ಯಾಪ್ತಿ, ಹೋಬಳಿ ಕೇಂದ್ರ ಮತ್ತು ತಾಲೂಕು ಕೇಂದ್ರಗಳಿಗೆ ಇರುವ ದೂರ, ಸಾರಿಗೆ ಸಂಪರ್ಕ, ಭೌಗೋಳಿಕ ವಿಸ್ತೀರ್ಣ ಹಾಗೂ ಆಡಳಿತಾತ್ಮಕ ಅನುಕೂಲತೆಗಳನ್ನು ಪರಿಶೀಲಿಸಿ ಸ್ಪಷ್ಟ ಅಭಿಪ್ರಾಯದೊಂದಿಗೆ ವರದಿ ಸಲ್ಲಿಸುವಂತೆ ನಿರ್ದೇಶನ ನೀಡಲಾಗಿತ್ತು ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಈ ವರದಿಯನ್ನು ರಾಯಚೂರು ಸಹಾಯಕ ಆಯುಕ್ತರ ಮೂಲಕ ಸಲ್ಲಿಸುವಂತೆ ಸೂಚಿಸಲಾಗಿದ್ದರೂ, ಸುಮಾರು ಒಂದು ವರ್ಷ ಕಳೆದರೂ ಯಾವುದೇ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಆರೋಪಿಸಿ ಅರಕೇರಾ ತಹಶೀಲ್ದಾರ್ ಅಮರೇಶ ಬಿರಾದರ್ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ರಾಮದುರ್ಗ ಗ್ರಾಮ ಪಂಚಾಯಿತಿಯನ್ನು ಅರಕೇರಾ ತಾಲೂಕಿಗೆ ಸೇರ್ಪಡೆಗೊಳಿಸಿರುವ ನಿರ್ಧಾರವನ್ನು ಮರುಪರಿಶೀಲಿಸಿ, ಸಾರ್ವಜನಿಕರ ಅಭಿಪ್ರಾಯ ಹಾಗೂ ಆಡಳಿತಾತ್ಮಕ ಅನುಕೂಲತೆಗಳನ್ನು ಪರಿಗಣಿಸಿ ಗಟ್ಟೂರು ಹೋಬಳಿಗೆ ಮರು ಸೇರ್ಪಡೆಗೊಳಿಸಬೇಕು. ಈ ಮೂಲಕ ರಾಮದುರ್ಗ ಗ್ರಾಮ ಪಂಚಾಯಿತಿಯನ್ನು ದೇವದುರ್ಗ ತಾಲೂಕಿನ ವ್ಯಾಪ್ತಿಯಲ್ಲಿಯೇ ಮುಂದುವರಿಸಲು ಸರ್ಕಾರ ಆದೇಶ ಹೊರಡಿಸಬೇಕು ಎಂದು ಆಗ್ರಹಿಸಿದ್ದಾರೆ.

ತಮ್ಮ ಬೇಡಿಕೆಗೆ ಸಂಬಂಧಪಟ್ಟ ಅಧಿಕಾರಿಗಳು ಸ್ಪಂದಿಸದ ಹಿನ್ನೆಲೆಯಲ್ಲಿ ನವೆಂಬರ್ 18ರಂದು ರಾಮದುರ್ಗ ಕ್ರಾಸ್‌ನಲ್ಲಿ ರಸ್ತೆ ತಡೆ ಚಳವಳಿ ಹಾಗೂ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ರಾಮದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಾಮದುರ್ಗ, ಕಾಕರಗಲ್, ಸುಕೇಶ್ವರಹಾಳ್ ಮತ್ತು ಜಿನ್ನಾಪೂರು ಗ್ರಾಮಗಳ ಸಾರ್ವಜನಿಕರು ಪ್ರತಿಭಟನೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಬುದ್ಧ ಮತ್ತು ಅಂಬೇಡ್ಕರ್ ಅವರ ಚಿಂತನೆಗಳು ಇಂದಿಗೂ ಪ್ರಸ್ತುತ: ಪ್ರೊ. ಎಚ್.ಟಿ. ಪೋತೆ

ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಬುದ್ಧ ಮತ್ತು ಅಂಬೇಡ್ಕರ್ ಅವರ ಚಿಂತನೆಗಳನ್ನು ಅಧ್ಯಯನ ಮಾಡುವ ಮೂಲಕ ಸಾಮಾಜಿಕ ಪ್ರಜ್ಞೆಯನ್ನು ವೃದ್ಧಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಿವಾನಂದ ಕೆಳಗಿನಮನಿ ಮಾತನಾಡಿ, ಬುದ್ಧನ ವಿಚಾರಧಾರೆಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅಂಬೇಡ್ಕರ್ ಅವರು ಭಾರತದ ಸಾಮಾಜಿಕ ಹಾಗೂ ಸಾಂಸ್ಕೃತಿಕ ಪರಿಸ್ಥಿತಿಗಳನ್ನು ಆಳವಾಗಿ ಅಧ್ಯಯನ ಮಾಡಿ, ಸಂವಿಧಾನ ರಚನೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಅವರ ಚಿಂತನೆಗಳನ್ನು ಅರ್ಥಮಾಡಿಕೊಳ್ಳಲು ಅವರ ಕೃತಿಗಳನ್ನು ಓದುವುದು ಅತ್ಯಗತ್ಯ ಎಂದು ತಿಳಿಸಿದರು.

ವಿಶ್ರಾಂತ ಕುಲಪತಿ ಮಲ್ಲೇಪುರಂ ಜಿ. ವೆಂಕಟೇಶ ಮಾತನಾಡಿ, ಬುದ್ಧನ ತತ್ವಗಳು ವಿವಿಧ ಭಾಷೆಗಳಲ್ಲಿ ವಿಶ್ಲೇಷಣೆಗೆ ಒಳಪಟ್ಟಿವೆ. ಅಂಬೇಡ್ಕರ್ ಅವರು ಬೌದ್ಧ ಸಂಸ್ಕೃತಿ ಮತ್ತು ತತ್ವಶಾಸ್ತ್ರದ ಕುರಿತು ವ್ಯಾಪಕ ಅಧ್ಯಯನ ನಡೆಸಿದ್ದಾರೆ. ಬುದ್ಧನ ಜೀವನ, ಮಹಾಭಿನಿಷ್ಕ್ರಮಣ, ವೈಚಾರಿಕ ಚಿಂತನೆ ಹಾಗೂ ಧಮ್ಮದ ಸ್ವರೂಪದ ಕುರಿತು ಯುವಜನರು ತಿಳಿದುಕೊಳ್ಳಬೇಕು ಎಂದು ಹೇಳಿದರು.

ವಿಶ್ವವಿದ್ಯಾಲಯದ ಕುಲಸಚಿವ ಡಾ. ಎ. ಚನ್ನಪ್ಪ ಮಾತನಾಡಿ, ಬುದ್ಧ ಮತ್ತು ಅಂಬೇಡ್ಕರ್ ಅವರ ಜೀವನ ಸಾಧನೆಗಳನ್ನು ಪರಿಚಯಿಸುವ ಸಾಹಿತ್ಯವನ್ನು ವಿದ್ಯಾರ್ಥಿಗಳು ಹೆಚ್ಚಾಗಿ ಓದಬೇಕು. ಅವರ ವಿಚಾರಗಳ ಕುರಿತು ಶೈಕ್ಷಣಿಕ ವೇದಿಕೆಗಳಲ್ಲಿ ಚರ್ಚೆ ನಡೆಯುವುದರಿಂದ ಯುವಜನರಲ್ಲಿ ಸಾಮಾಜಿಕ ಅರಿವು ಮೂಡಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮೌಲ್ಯಮಾಪನ ಕುಲಸಚಿವ ಡಾ. ವಿರುಪಾಕ್ಷಯ್ಯ ಡಿಬಿಎಂ ಮಾತನಾಡಿ, ಅಂಬೇಡ್ಕರ್ ಅವರನ್ನು ಯಾವುದೇ ಒಂದು ಸಮುದಾಯಕ್ಕೆ ಸೀಮಿತಗೊಳಿಸದೆ ವಿಶ್ವಮಾನವೀಯ ಚಿಂತನೆಯ ಪ್ರತಿನಿಧಿಯಾಗಿ ಪರಿಗಣಿಸಬೇಕು. ಅವರ ವಿಚಾರಗಳು ಇಡೀ ಸಮಾಜಕ್ಕೆ ಸ್ಫೂರ್ತಿದಾಯಕವಾಗಿವೆ ಎಂದು ಹೇಳಿದರು.

ವಿಶೇಷ ಆಹ್ವಾನಿತರಾಗಿ ಭಾಗವಹಿಸಿದ್ದ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಜೀಶಾನ್ ಅಖಿಲ್ ಸಿದ್ದಿಖಿ ಮಾತನಾಡಿ, ವಿಶ್ವವಿದ್ಯಾಲಯಗಳು ಮಹನೀಯರ ಜೀವನ, ವ್ಯಕ್ತಿತ್ವ ಮತ್ತು ವಿಚಾರಧಾರೆಗಳ ಕುರಿತು ಮುಕ್ತ ಚರ್ಚೆಗೆ ವೇದಿಕೆಯಾಗಬೇಕು. ಬುದ್ಧ ಮತ್ತು ಆತನ ಧಮ್ಮ ಕೃತಿಯು ನೈತಿಕತೆ, ಮಾನವೀಯತೆ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ತಿಳಿಸುವ ಮಹತ್ವದ ಗ್ರಂಥವಾಗಿದೆ ಎಂದು ಅಭಿಪ್ರಾಯಪಟ್ಟರು.

ವಿಚಾರ ಸಂಕಿರಣದ ಮೊದಲ ಗೋಷ್ಠಿಯಲ್ಲಿ ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ. ಅಪ್ಪಗೆರೆ ಸೋಮಶೇಖರ್ ಅವರು ಬುದ್ಧ ಮತ್ತು ಆತನ ಧಮ್ಮ ಕೃತಿಯ ವೈಚಾರಿಕ ಆಶಯಗಳ ಕುರಿತು ವಿಷಯ ಮಂಡಿಸಿದರು.

ಎರಡನೇ ಗೋಷ್ಠಿಯಲ್ಲಿ ಕಲಬುರಗಿಯ ನಿವೃತ್ತ ಪ್ರಾಧ್ಯಾಪಕ ಹಾಗೂ ಅನುವಾದಕ ಡಾ. ಸೂರ್ಯಕಾಂತ ಸುಜ್ಯಾತ್ ಅವರು ಕೃತಿಯ ರಚನಾತ್ಮಕ ಸ್ವರೂಪದ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಉಪಕುಲಸಚಿವ ಡಾ. ಕೆ. ವೆಂಕಟೇಶ, ಹಣಕಾಸು ಅಧಿಕಾರಿ ಡಾ. ಸುಯಮೀಂದ್ರ ಕುಲಕರ್ಣಿ, ಶಿಕ್ಷಣ ನಿಕಾಯದ ಡೀನ್ ಪ್ರೊ. ಪಾರ್ವತಿ ಸಿ.ಎಸ್., ವಾಣಿಜ್ಯ ನಿಕಾಯದ ಡೀನ್ ಪ್ರೊ. ಪಿ. ಭಾಸ್ಕರ್, ಕಲಾ ನಿಕಾಯದ ಡೀನ್ ಡಾ. ಲತಾ ಸೇರಿದಂತೆ ವಿವಿಧ ವಿಭಾಗಗಳ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

ಪಾಲಿ ಇನ್‌ಸ್ಟಿಟ್ಯೂಟ್‌ನ ಸಂಚಾಲಕ ಡಾ. ಎಂ.ಬಿ. ಕಟ್ಟಿ ಸ್ವಾಗತಿಸಿದರು. ರಾಜ್ಯಶಾಸ್ತ್ರ ವಿಭಾಗದ ಉಪನ್ಯಾಸಕ ಡಾ. ರಮೇಶ್ ಅತಿಥಿಗಳನ್ನು ಪರಿಚಯಿಸಿದರು. ಇತಿಹಾಸ ವಿಭಾಗದ ವಿದ್ಯಾರ್ಥಿನಿ ಸ್ನೇಹಾ ಚವ್ಹಾಣ ಪ್ರಾರ್ಥಿಸಿದರು. ಇತಿಹಾಸ ವಿಭಾಗದ ಉಪನ್ಯಾಸಕಿ ಸೌಮ್ಯ ಹಾಗೂ ಸಸ್ಯಶಾಸ್ತ್ರ ವಿಭಾಗದ ಉಪನ್ಯಾಸಕಿ ಸುಶ್ಮಿತಾ ಮಾರೇಂ ಕಾರ್ಯಕ್ರಮ ನಿರೂಪಿಸಿದರು. ವಿವಿಧ ವಿಭಾಗಗಳ ಅತಿಥಿ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮೊದಲನೇ ಪುಟದಿಂದ

(ಮೊದಲನೇ ಪುಟದಿಂದ)

ರಾಮಾಯಣ ಅಬ್ಬರ: ಏಳು ದಿನಗಳಲ್ಲಿ ₹934.55 ಕೋಟಿ ಗಳಿಕೆ, ₹1,000 ಕೋಟಿ ಗಡಿಯತ್ತ ದಾಪುಗಾಲು

ದಾಖಲಿಸಿರುವ ಭಾಷಾ ಆವೃತ್ತಿಯಾಗಿ ಕನ್ನಡ ಹೊರಹೊಮ್ಮಿರುವುದು ವಿಶೇಷವಾಗಿದೆ. ಕನ್ನಡದ ನಟ ಯಶ್ ಚಿತ್ರದಲ್ಲಿ ರಾವಣನ ಪಾತ್ರ ನಿರ್ವಹಿಸಿರುವುದು ಕರ್ನಾಟಕದ ಪ್ರೇಕ್ಷಕರಲ್ಲಿ ಚಿತ್ರದ ಬಗ್ಗೆ ಹೆಚ್ಚಿನ ಕುತೂಹಲ ಮೂಡಿಸಿದೆ. ಕನ್ನಡದ ಡಬ್ ಆವೃತ್ತಿಯ ಗಳಿಕೆ ₹45 ಕೋಟಿ ದಾಟಿರುವುದು ಚಿತ್ರದ ಬಹುಭಾಷಾ ಯಶಸ್ಸಿಗೆ ಸಾಕ್ಷಿಯಾಗಿದೆ.

ಕರ್ನಾಟಕದಲ್ಲಿ ಕನ್ನಡ, ಹಿಂದಿ ಸೇರಿದಂತೆ ವಿವಿಧ ಭಾಷಾ ಆವೃತ್ತಿಗಳಿಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ರಾಜ್ಯದ ಒಟ್ಟು ಗಳಿಕೆ ₹100 ಕೋಟಿ ದಾಟಿದೆ ಎಂಬ ವರದಿಗಳಿದ್ದರೂ, ಅದರ ನಿಖರ ಮೊತ್ತಕ್ಕೆ ಪ್ರತ್ಯೇಕ ದೃಢೀಕರಣ ಅಗತ್ಯವಾಗಿದೆ.

ಚಿತ್ರದಲ್ಲಿ ರಣಬೀರ್ ಕಪೂರ್ ಶ್ರೀರಾಮನಾಗಿ, ಸಾಯಿ ಪಲ್ಲವಿ ಸೀತೆಯಾಗಿ, ಯಶ್ ರಾವಣನಾಗಿ ಹಾಗೂ ರವಿ ದುಬೆ ಲಕ್ಷ್ಮಣನಾಗಿ ಅಭಿನಯಿಸಿದ್ದಾರೆ. ನಮಿತ್ ಮಲ್ಹೋತ್ರಾ ಅವರ ಪ್ರೈಮ್ ಫೋಕಸ್ ಸ್ಟುಡಿಯೋಸ್ ಹಾಗೂ ಯಶ್ ಅವರ ಮಾನ್‌ಸ್ಟರ್ ಮೈಂಡ್ ಕ್ರಿಯೇಷನ್ಸ್ ಸಹಯೋಗದಲ್ಲಿ ಚಿತ್ರ ನಿರ್ಮಾಣವಾಗಿದೆ.

ಭಾರತೀಯ ಪುರಾಣದ ಕಥೆಯನ್ನು ಅತ್ಯಾಧುನಿಕ ದೃಶ್ಯ ತಂತ್ರಜ್ಞಾನ ಹಾಗೂ ಬೃಹತ್ ನಿರ್ಮಾಣದ ಮೂಲಕ ತೆರೆಗೆ ತಂದಿರುವ ರಾಮಾಯಣ ಚಿತ್ರವು ಮೊದಲ ಏಳು ದಿನಗಳ ಜಾಗತಿಕ ಗಳಿಕೆಯಲ್ಲಿ ಭಾರತೀಯ ಚಿತ್ರಗಳ ಪೈಕಿ ಮೂರನೇ ಅತ್ಯಧಿಕ ಗಳಿಕೆಯ ಸಾಧನೆ ಮಾಡಿದೆ ಎಂದು ಚಿತ್ರವ್ಯಾಪಾರ ವರದಿಗಳು ತಿಳಿಸಿವೆ.

ಎರಡನೇ ವಾರದಲ್ಲಿಯೂ ಚಿತ್ರವು ತನ್ನ ಗಳಿಕೆಯ ವೇಗವನ್ನು ಕಾಯ್ದುಕೊಳ್ಳಲಿದೆಯೇ ಎಂಬುದು ಕುತೂಹಲ ಮೂಡಿಸಿದೆ. ವಿಶೇಷವಾಗಿ ವಿದೇಶಿ ಮಾರುಕಟ್ಟೆಗಳ ಪ್ರದರ್ಶನ ಹಾಗೂ ವಾರಾಂತ್ಯದ ಟಿಕೆಟ್ ಮಾರಾಟ ಚಿತ್ರದ ಮುಂದಿನ ಬಾಕ್ಸ್ ಆಫೀಸ್ ಸಾಧನೆಯನ್ನು ನಿರ್ಧರಿಸಲಿವೆ.

ಮೋದಿ ಹೆಸರು ಕೇಳಿದರೆ ಬಿಜೆಪಿ ನಾಯಕರಿಗೆ ಮಾತೇ ಹೊರಡುವುದಿಲ್ಲ: ಪ್ರಿಯಾಂಕ್ ಖರ್ಗೆ ವ್ಯಂಗ್ಯ

ದಿನನಿತ್ಯದ ಬಳಕೆಯ ವಸ್ತುಗಳ ಬೆಲೆ ಹೆಚ್ಚಳದಿಂದ ಸಾಮಾನ್ಯ ಜನರು ಎದುರಿಸುತ್ತಿರುವ ಆರ್ಥಿಕ ಹೊರೆಯ ಬಗ್ಗೆ ಅವರಿಗೆ ಕಾಳಜಿ ಇಲ್ಲವೇ ಎಂದು ಪ್ರಶ್ನಿಸಿದರು.

ಬೆಲೆ ಏರಿಕೆಯ ವಿಚಾರದಲ್ಲಿ ಬಿಜೆಪಿ ನಾಯಕರು ಆಯ್ದ ವಿಷಯಗಳನ್ನಷ್ಟೇ ಮುಂದಿಟ್ಟುಕೊಂಡು ರಾಜ್ಯ ಸರ್ಕಾರವನ್ನು ಟೀಕಿಸುತ್ತಿದ್ದಾರೆ. ಜನಸಾಮಾನ್ಯರ ಮೇಲೆ ಪರಿಣಾಮ ಬೀರುವ ಇತರ ಬೆಲೆ ಏರಿಕೆಗಳ ಕುರಿತು ಕೂಡ ಅವರು ಧ್ವನಿ ಎತ್ತಬೇಕು ಎಂದು ಪ್ರಿಯಾಂಕ್ ಖರ್ಗೆ ಆಗ್ರಹಿಸಿದರು.

ದೌರ್ಜನ್ಯ ನಿಯಂತ್ರಿಸುವುದು ಪ್ರತಿಯೊಬ್ಬರ ಜವಾಬ್ದಾರಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ಪರಿಶಿಷ್ಟ ಸಮುದಾಯಗಳ ಕಾಲೋನಿಗಳಲ್ಲಿ ಕುಡಿಯುವ ನೀರು, ರಸ್ತೆ, ವಿದ್ಯುತ್ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಆದ್ಯತೆಯ ಮೇರೆಗೆ ಕಲ್ಪಿಸಬೇಕು. ಅರ್ಹರಿಗೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸುವ ಮೂಲಕ ಸಾಮಾಜಿಕ ನ್ಯಾಯ ಒದಗಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದರು.

ಫಲಾನುಭವಿಗಳಿಗೆ ಅಗತ್ಯ ಪ್ರಮಾಣದ ಅನುದಾನ ಬಿಡುಗಡೆಯಾಗದ ಕಾರಣ ಸಲ್ಲಿಕೆಯಾಗಿರುವ ಎಲ್ಲ ಪ್ರಸ್ತಾವನೆಗಳಿಗೆ ಸೌಲಭ್ಯ ಒದಗಿಸಲು ಸಾಧ್ಯವಾಗಿಲ್ಲ. ಮುಂದಿನ ದಿನಗಳಲ್ಲಿ ಬಾಕಿ ಇರುವ ಪ್ರಸ್ತಾವನೆಗಳಿಗೂ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ಗುರುತಿಸಿರುವ ಕೆಲವು ಗ್ರಾಮಗಳಲ್ಲಿ ಎಲ್ಲ ಸಮುದಾಯಗಳ ಮುಖಂಡರು ಹಾಗೂ ಸಾರ್ವಜನಿಕರನ್ನು ಒಳಗೊಂಡು ನಿಯಮಿತವಾಗಿ ಸಭೆಗಳನ್ನು ಆಯೋಜಿಸಬೇಕು. ಸಭೆಗಳ ಕುರಿತು ಗ್ರಾಮಗಳಲ್ಲಿ ಡಂಗೂರ ಸಾರುವ ಮೂಲಕ ಮುಂಚಿತವಾಗಿ ಮಾಹಿತಿ ನೀಡಬೇಕು. ಎಲ್ಲ ಸಮುದಾಯಗಳ ಜನರನ್ನು ಒಗ್ಗೂಡಿಸಿ ಶಾಂತಿ ಮತ್ತು ಸೌಹಾರ್ದತೆಯ ವಾತಾವರಣ ನಿರ್ಮಿಸಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ ಮಾತನಾಡಿ, ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಪ್ರತಿ ಬುಧವಾರ ಶಾಂತಿಪಾಲನಾ ಸಭೆಗಳನ್ನು ನಡೆಸಲಾಗುತ್ತಿದೆ. ಈ ಸಭೆಗಳಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿ ಸಮುದಾಯಗಳ ನಡುವೆ ಶಾಂತಿ, ಸೌಹಾರ್ದತೆ ಹಾಗೂ ಪರಸ್ಪರ ಸಹಬಾಳ್ವೆಯ ಮಹತ್ವದ ಕುರಿತು ಜಾಗೃತಿ ಮೂಡಿಸುತ್ತಿದ್ದಾರೆ ಎಂದು ತಿಳಿಸಿದರು.

ಅದೇ ರೀತಿ ಪ್ರತಿ ಭಾನುವಾರ ಜಿಲ್ಲೆಯ ಪೊಲೀಸ್ ಠಾಣೆಗಳಲ್ಲಿ ಸಭೆಗಳನ್ನು ನಡೆಸಲಾಗುತ್ತಿದೆ. ಯಾವುದೇ ಪೊಲೀಸ್ ಠಾಣೆಯಲ್ಲಿ ಸಭೆ ನಡೆಯದಿದ್ದರೆ ಆ ಕುರಿತು ತಮ್ಮ ಗಮನಕ್ಕೆ ತರಬೇಕು ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೃಷ್ಣ ಶಾವಂತಗೇರಾ ಅವರು ಹಿಂದಿನ ಸಭೆಯ ನಡಾವಳಿಗಳನ್ನು ಓದಿ ವಿವರಿಸಿದರು.

ಸಭೆಯಲ್ಲಿ ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ, ರಾಯಚೂರು ಸಹಾಯಕ ಆಯುಕ್ತ ಡಾ. ಹಂಪಣ್ಣ ಸಜ್ಜನ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ. ಹರೀಶ್, ಸಮಿತಿ ಸದಸ್ಯರಾದ ರವೀಂದ್ರ ಜಲ್ದಾರ್, ಕೆ.ಇ. ಕುಮಾರ್, ಹೇಮರಾಜ್ ಅಸ್ಕಿಹಾಳ್, ಎನ್. ರಘುವೀರ್ ನಾಯಕ, ಡಾ. ರವಿಕುಮಾರ್ ಅಸ್ಕಿಹಾಳ್, ಪವನ್ ಕಿಶೋರ್ ಪಾಟೀಲ್, ಬಸವರಾಜ ನಕ್ಕುಂದಿ, ಟಿ. ಸುಧಾಮ, ರಿಮ್ಸ್ ನಿರ್ದೇಶಕ ಡಾ. ಬಿ.ಕೆ. ರಮೇಶ್, ಆಹಾರ ಇಲಾಖೆಯ ಉಪನಿರ್ದೇಶಕ ನಜೀರ್ ಅಹ್ಮದ್, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ ಸೇರಿದಂತೆ ವಿವಿಧ ತಾಲೂಕುಗಳ ತಹಶೀಲ್ದಾರರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ನಿಗಮಗಳ ಜಿಲ್ಲಾ ವ್ಯವಸ್ಥಾಪಕರು ಉಪಸ್ಥಿತರಿದ್ದರು.

ವಾಲ್ಮೀಕಿ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾಗಿ ಡಾ. ವಿರುಪಾಕ್ಷಯ್ಯ ಅಧಿಕಾರ ಸ್ವೀಕಾರ

ಮೌಲ್ಯಮಾಪನ ಕುಲಸಚಿವ ಡಾ. ವಿರುಪಾಕ್ಷಯ್ಯ ಅವರನ್ನು ಸ್ವಾಗತಿಸಿ ಅಭಿನಂದಿಸಿದರು.

ಕುಲಸಚಿವ ಡಾ. ಎ. ಚನ್ನಪ್ಪ, ಹಣಕಾಸು ಅಧಿಕಾರಿ ಡಾ. ಸುಯಮೀಂದ್ರ ಕುಲಕರ್ಣಿ, ಉಪಕುಲಸಚಿವ ಡಾ. ಕೆ. ವೆಂಕಟೇಶ, ಶಿಕ್ಷಣ ನಿಕಾಯದ ಡೀನ್ ಪ್ರೊ. ಪಾರ್ವತಿ ಸಿ.ಎಸ್., ವಾಣಿಜ್ಯ ನಿಕಾಯದ ಡೀನ್ ಪ್ರೊ. ಪಿ. ಭಾಸ್ಕರ್, ಕಲಾ ನಿಕಾಯದ ಡೀನ್ ಡಾ. ಲತಾ, ಗ್ರಂಥಪಾಲಕ ಡಾ. ಜಿ.ಎಸ್. ಬಿರಾದಾರ ಸೇರಿದಂತೆ ವಿಶ್ವವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ನೂತನ ಕುಲಸಚಿವರನ್ನು ಸನ್ಮಾನಿಸಿ ಗೌರವಿಸಿದರು.

ಅಕ್ಕ ಕೆಫೆಗಳ ಸ್ಥಾಪನೆಯಲ್ಲಿ ರಾಜ್ಯಕ್ಕೆ ರಾಯಚೂರು ಪ್ರಥಮ: ಜಿಪಂ ಸಿಇಒ ಈಶ್ವರ್ ಕಾಂದೂಗೆ ಪ್ರಶಂಸನಾ ಪತ್ರ

ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಅಕ್ಕ ಕೆಫೆಗಳ ಮೂಲಕ ಮಹಿಳೆಯರಿಗೆ ಉದ್ಯೋಗಾವಕಾಶ ಕಲ್ಪಿಸುವುದರ ಜೊತೆಗೆ ಅವರ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣಕ್ಕೆ ಆದ್ಯತೆ ನೀಡಿರುವುದು ಶ್ಲಾಘನೀಯವಾಗಿದೆ. ಗ್ರಾಮೀಣ ಜೀವನೋಪಾಯ ಚಟುವಟಿಕೆಗಳನ್ನು ವಿಸ್ತರಿಸುವ ನಿಟ್ಟಿನಲ್ಲಿ ಜಿಲ್ಲೆಯ ಪ್ರಯತ್ನ ಇತರ ಜಿಲ್ಲೆಗಳಿಗೂ ಮಾದರಿಯಾಗಿದೆ ಎಂದು ಪ್ರಶಂಸಿಸಿದ್ದಾರೆ.

ಮುಂದಿನ ದಿನಗಳಲ್ಲಿ ಅಕ್ಕ ಕೆಫೆಗಳ ನಿರಂತರ ಮತ್ತು ಸುಸ್ಥಿರ ಕಾರ್ಯನಿರ್ವಹಣೆಗೆ ಒತ್ತು ನೀಡಬೇಕು. ಗ್ರಾಹಕರಿಗೆ ಗುಣಮಟ್ಟದ ಸೇವೆ ಒದಗಿಸುವುದರೊಂದಿಗೆ ಮಹಿಳೆಯರ ಉದ್ಯಮಗಳನ್ನು ಮತ್ತಷ್ಟು ಬಲಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ಅಭಿಯಾನ ನಿರ್ದೇಶಕರು ಆಶಯ ವ್ಯಕ್ತಪಡಿಸಿದ್ದಾರೆ.

ಈ ಸಾಧನೆಗೆ ಶ್ರಮಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ, ಸ್ವಸಹಾಯ ಸಂಘಗಳ ಸದಸ್ಯರು ಹಾಗೂ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳ ಪದಾಧಿಕಾರಿಗಳನ್ನು ಅಭಿನಂದಿಸಿರುವ ಅವರು, ಮಹಿಳೆಯರ ಆರ್ಥಿಕ ಸ್ವಾವಲಂಬನೆಗಾಗಿ ಇದೇ ರೀತಿಯ ಕಾರ್ಯಚಟುವಟಿಕೆಗಳನ್ನು ಮುಂದುವರಿಸುವಂತೆ ತಿಳಿಸಿದ್ದಾರೆ.

ಜನಜಾತಿಯ ಗೌರವ ದಿವಸ: ನ.14ರಂದು ದೀಪ ಬೆಳಗಿಸುವ ಹಾಗೂ ಸ್ವಚ್ಛತಾ ಅಭಿಯಾನ


ಪಾತ್ರ, ಸಾಮಾಜಿಕ ಕೊಡುಗೆ ಹಾಗೂ ಸಾಂಸ್ಕೃತಿಕ ವೈಶಿಷ್ಟ್ಯಗಳನ್ನು ಪರಿಚಯಿಸಲಾಗುವುದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಾಲ್ಮೀಕಿ ಸಮುದಾಯದ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ಸನ್ಮಾನಿಸಲಾಗುವುದು. ಇಂತಹ ಕಾರ್ಯಕ್ರಮಗಳು ಸಮುದಾಯದ ಯುವಜನರಲ್ಲಿ ತಮ್ಮ ಇತಿಹಾಸ ಮತ್ತು ಪರಂಪರೆಯ ಕುರಿತು ಅರಿವು ಮೂಡಿಸಲು ಸಹಕಾರಿಯಾಗಲಿವೆ ಎಂದು ಅಭಿಪ್ರಾಯಪಟ್ಟರು.

ಬುಡಕಟ್ಟು ಸಮುದಾಯಗಳ ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಸಾರ್ವಜನಿಕರು ಜನಜಾತಿಯ ಗೌರವ ದಿವಸದ ಅಂಗವಾಗಿ ಆಯೋಜಿಸಿರುವ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದು ರೂಪಾ ಶ್ರೀನಿವಾಸ್ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಗದೀಶ ನಾಯಕ, ವೀರೇಶ ನಾಯಕ ಸೇರಿದಂತೆ ಇತರರು ಉಪಸ್ಥಿತರಿದ್ದರು.

12ನೇ ರಾಯಚೂರು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಾಹಿತ್ಯಾಸಕ್ತರಿಗೆ ಆತ್ಮೀಯ ಆಹ್ವಾನ



ರಾಯಚೂರು, ನ.11: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನವೆಂಬರ್ 14 ಮತ್ತು 15ರಂದು ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಎರಡು ದಿನಗಳ ಕಾಲ ಆಯೋಜಿಸಿರುವ 12ನೇ ರಾಯಚೂರು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಜಿಲ್ಲೆಯ ಕನ್ನಡ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯರು, ಸಾಹಿತಿಗಳು, ಸಾಹಿತ್ಯಾಸಕ್ತರು ಹಾಗೂ ಕನ್ನಡಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮ್ಮೇಳನವನ್ನು ಯಶಸ್ವಿಗೊಳಿಸುವಂತೆ ಸ್ವಾಗತ ಸಮಿತಿ ಆತ್ಮೀಯವಾಗಿ ಆಹ್ವಾನಿಸಿದೆ.

ಕನ್ನಡ ನಾಡಿನ ಸಾಹಿತ್ಯ, ಭಾಷೆ, ಸಂಸ್ಕೃತಿ ಹಾಗೂ ಕಲೆಯ ಸಂರಕ್ಷಣೆ ಮತ್ತು ಪ್ರಸಾರದ ಉದ್ದೇಶದಿಂದ ಸಮ್ಮೇಳನವನ್ನು ಅರ್ಥಪೂರ್ಣವಾಗಿ ಆಯೋಜಿಸಲಾಗಿದೆ. ಜಿಲ್ಲೆಯ ಸಾಹಿತ್ಯಿಕ ಪರಂಪರೆ, ಸಾಂಸ್ಕೃತಿಕ ವೈಭವ ಹಾಗೂ ಕನ್ನಡದ ಹಿರಿಮೆಯನ್ನು ಸಾರುವ ವಿವಿಧ ಕಾರ್ಯಕ್ರಮಗಳು ಎರಡು ದಿನಗಳ ಕಾಲ ನಡೆಯಲಿವೆ.

ಸಮ್ಮೇಳನದ ಮೊದಲ ದಿನವಾದ ನವೆಂಬರ್ 14ರಂದು ಬೆಳಿಗ್ಗೆ ನಗರದ ಮಹಿಳಾ ಸಮಾಜದಿಂದ ಭವ್ಯ ಸಾಹಿತ್ಯಿಕ ಹಾಗೂ ಸಾಂಸ್ಕೃತಿಕ ಮೆರವಣಿಗೆ ಆರಂಭವಾಗಲಿದೆ. ಮೆರವಣಿಗೆಯು ಮಹಾನಗರ ಪಾಲಿಕೆ, ಕೇಂದ್ರ ಬಸ್ ನಿಲ್ದಾಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ಮಾರ್ಗವಾಗಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರವನ್ನು ತಲುಪಲಿದೆ.

ನಂತರ ಧ್ವಜಾರೋಹಣ, ಸಮ್ಮೇಳನದ ಉದ್ಘಾಟನೆ, ಗ್ರಂಥ ಪ್ರದರ್ಶನ, ವಿವಿಧ ಸಾಹಿತ್ಯಿಕ ಮತ್ತು ವಿಚಾರಗೋಷ್ಠಿಗಳು, ಕವಿಗೋಷ್ಠಿಗಳು ಸೇರಿದಂತೆ ಹಲವು ಕಾರ್ಯಕ್ರಮಗಳು ಜರುಗಲಿವೆ. ಇದೇ ಸಂದರ್ಭದಲ್ಲಿ ನಾಡಿನ ಹಿರಿಯ ಸಾಹಿತಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಸನ್ಮಾನಿಸಲಾಗುವುದು.

ಜಿಲ್ಲೆಯ ಕನ್ನಡ ಸಾಹಿತ್ಯ ಪರಿಷತ್ತಿನ ಎಲ್ಲ ಆಜೀವ ಸದಸ್ಯರು, ಹಿರಿಯ ಸಾಹಿತಿಗಳು, ಕವಿಗಳು, ಲೇಖಕರು, ಸಾಹಿತ್ಯಾಸಕ್ತರು, ಕಲಾವಿದರು, ಕಲಾಭಿಮಾನಿಗಳು, ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು ಹಾಗೂ ಕನ್ನಡಾಭಿಮಾನಿಗಳು ಈ ಪತ್ರಿಕಾ ಪ್ರಕಟಣೆಯನ್ನೇ ಅಧಿಕೃತ ಆಹ್ವಾನವೆಂದು ಪರಿಗಣಿಸಿ ಸಮ್ಮೇಳನದಲ್ಲಿ ಭಾಗವಹಿಸಬೇಕು ಎಂದು ಸ್ವಾಗತ ಸಮಿತಿ ಮನವಿ ಮಾಡಿದೆ.

ಕನ್ನಡ ನಾಡು, ನುಡಿ, ಸಾಹಿತ್ಯ ಮತ್ತು ಸಂಸ್ಕೃತಿಯ ಮಹತ್ವವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಈ ನುಡಿ ಹಬ್ಬದಲ್ಲಿ ಸಾರ್ವಜನಿಕರ ಸಕ್ರಿಯ ಪಾಲ್ಗೊಳ್ಳುವಿಕೆ ಅತ್ಯಂತ ಅಗತ್ಯವಾಗಿದೆ. ಜಿಲ್ಲೆಯ ಎಲ್ಲ ಕನ್ನಡಾಭಿಮಾನಿಗಳು ಒಗ್ಗಟ್ಟಿನಿಂದ ಭಾಗವಹಿಸುವ ಮೂಲಕ ಸಮ್ಮೇಳನದ ಯಶಸ್ಸಿಗೆ ಕೈಜೋಡಿಸಬೇಕು ಎಂದು ಕೋರಲಾಗಿದೆ.

ಬನ್ನಿ, ಕನ್ನಡದ ತೇರನ್ನು ಎಳೆಯೋಣ; ಕನ್ನಡ ನಾಡು, ನುಡಿ, ಸಾಹಿತ್ಯ ಮತ್ತು ಸಂಸ್ಕೃತಿಯ ವೈಭವವನ್ನು ಸಾರೋಣ ಎಂಬ ಆಶಯದೊಂದಿಗೆ ಸಮ್ಮೇಳನಕ್ಕೆ ಜಿಲ್ಲೆಯ ಸಮಸ್ತ ಕನ್ನಡಾಭಿಮಾನಿಗಳನ್ನು ಸ್ವಾಗತ ಸಮಿತಿ ಆಹ್ವಾನಿಸಿದೆ.

ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಶಿಲ್ಪಕಲಾವಿದ ಉರುಕುಂದಪ್ಪ ಬಡಿಗೇರ್‌ಗೆ ಗ್ರಾಮಸ್ಥರಿಂದ ಸನ್ಮಾನ



ರಾಯಚೂರು: ಶಿಲ್ಪಕಲಾ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಸಗಮಕುಂಟ ಗ್ರಾಮದ ಶಿಲ್ಪಕಲಾವಿದ ಉರುಕುಂದಪ್ಪ ಬಡಿಗೇರ್ ಅವರನ್ನು ಗ್ರಾಮಸ್ಥರು ಅಭಿನಂದಿಸಿ ಗೌರವಿಸಿದರು.

ನವೆಂಬರ್ 1ರಂದು ಜಿಲ್ಲಾಡಳಿತದ ವತಿಯಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಶಿಲ್ಪಕಲಾ ಕ್ಷೇತ್ರಕ್ಕೆ ನೀಡಿರುವ ಕೊಡುಗೆಯನ್ನು ಪರಿಗಣಿಸಿ ಉರುಕುಂದಪ್ಪ ಬಡಿಗೇರ್ ಅವರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಗಿತ್ತು. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಪ್ರಶಸ್ತಿ ನೀಡಿ ಗೌರವಿಸಿದ್ದರು.

ಈ ಹಿನ್ನೆಲೆಯಲ್ಲಿ ನವೆಂಬರ್ 5ರಂದು ಸಗಮಕುಂಟ ಗ್ರಾಮಸ್ಥರು ಅಭಿನಂದನಾ ಸಮಾರಂಭ ಆಯೋಜಿಸಿ, ಪ್ರಶಸ್ತಿ ಪುರಸ್ಕೃತ ಕಲಾವಿದರನ್ನು ಸನ್ಮಾನಿಸುವ ಮೂಲಕ ಅವರ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕರಿಯಪ್ಪ, ಗ್ರಾಮೀಣ ಪ್ರದೇಶಗಳಲ್ಲಿ ಅನೇಕ ಪ್ರತಿಭಾವಂತ ಕಲಾವಿದರಿದ್ದು, ಅವರ ಪ್ರತಿಭೆ ಮತ್ತು ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಅಗತ್ಯವಾಗಿದೆ. ಉರುಕುಂದಪ್ಪ ಬಡಿಗೇರ್ ಅವರಂತಹ ಅನುಭವಿ ಕಲಾವಿದರಿಗೆ ದೊರೆತ ಗೌರವವು ಇತರ ಕಲಾವಿದರಿಗೂ ಪ್ರೇರಣೆಯಾಗಲಿದೆ. ಅವರ ಮಾರ್ಗದರ್ಶನದಲ್ಲಿ ಮತ್ತಷ್ಟು ಪ್ರತಿಭೆಗಳು ಬೆಳೆಯಲು ಅವಕಾಶ ಸಿಗಲಿದೆ ಎಂದು ಅಭಿಪ್ರಾಯಪಟ್ಟರು.

ಕಾಂಗ್ರೆಸ್ ಮುಖಂಡ ಲಕ್ಷ್ಮಣ ಮಡಿವಾಳ ಮಾತನಾಡಿ, ಸಗಮಕುಂಟ ಗ್ರಾಮದ ಕಲಾವಿದರೊಬ್ಬರ ಸಾಧನೆಯನ್ನು ಜಿಲ್ಲಾಡಳಿತ ಗುರುತಿಸಿ ರಾಜ್ಯೋತ್ಸವ ಪ್ರಶಸ್ತಿ ನೀಡಿರುವುದು ಗ್ರಾಮದ ಜನತೆಗೆ ಸಂತಸ ತಂದಿದೆ. ಉರುಕುಂದಪ್ಪ ಬಡಿಗೇರ್ ಅವರ ಕಲಾಸೇವೆ ಗ್ರಾಮಕ್ಕೆ ವಿಶೇಷ ಗೌರವ ತಂದುಕೊಟ್ಟಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರೌಢಶಾಲೆಯ ಮುಖ್ಯಶಿಕ್ಷಕ ಮೊಹಮ್ಮದ್ ಇಕ್ಬಾಲ್ ಮಾತನಾಡಿ, ಸಾಂಪ್ರದಾಯಿಕ ಶಿಲ್ಪಕಲೆಯನ್ನು ಉಳಿಸಿ ಬೆಳೆಸಲು ಯುವಜನರಿಗೆ ಸೂಕ್ತ ತರಬೇತಿ ನೀಡುವುದು ಅಗತ್ಯವಾಗಿದೆ. ರಥಗಳು ಹಾಗೂ ದೇವರ ಮೂರ್ತಿಗಳ ತಯಾರಿಕೆಯಂತಹ ಶಿಲ್ಪಕಲಾ ಕೌಶಲಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಬೇಕು ಎಂದು ಹೇಳಿದರು.

ಗ್ರಾಮದಲ್ಲಿ ಸಣ್ಣ ಪ್ರಮಾಣದ ಶಿಲ್ಪಕಲಾ ತರಬೇತಿ ಕೇಂದ್ರ ಸ್ಥಾಪಿಸಿ, ಉರುಕುಂದಪ್ಪ ಬಡಿಗೇರ್ ಅವರ ಅನುಭವ ಮತ್ತು ಮಾರ್ಗದರ್ಶನದಲ್ಲಿ ಆಸಕ್ತ ಯುವಕರಿಗೆ ತರಬೇತಿ ನೀಡಬೇಕು. ಇದರಿಂದ ಪಾರಂಪರಿಕ ಕಲೆಯ ಸಂರಕ್ಷಣೆಯೊಂದಿಗೆ ಗ್ರಾಮೀಣ ಯುವಕರಿಗೆ ಸ್ವಯಂ ಉದ್ಯೋಗದ ಅವಕಾಶಗಳನ್ನು ಕಲ್ಪಿಸಲು ಸಾಧ್ಯವಾಗುತ್ತದೆ ಎಂದು ಸಲಹೆ ನೀಡಿದರು.

ಉರುಕುಂದಪ್ಪ ಬಡಿಗೇರ್ ಅವರಿಗೆ ದೊರೆತ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಯು ಸಗಮಕುಂಟ ಗ್ರಾಮದ ಕಲಾ ಪರಂಪರೆಗೆ ಸಂದ ಗೌರವವಾಗಿದೆ ಎಂದು ಗ್ರಾಮಸ್ಥರು ಸಂತಸ ವ್ಯಕ್ತಪಡಿಸಿದರು.

ನ.20ರಿಂದ ಆರ್.ಬಿ. ಶುಗರ್ಸ್ ಕಾರ್ಖಾನೆಯಲ್ಲಿ ಕಬ್ಬು ನುರಿಸುವ ಕಾರ್ಯ ಆರಂಭ



ಲಿಂಗಸುಗೂರು: ತಾಲೂಕಿನ ಸುಣಕಲ್ ಗ್ರಾಮದಲ್ಲಿರುವ ಮಾಜಿ ಸಚಿವ ಆರ್.ಬಿ. ತಿಮ್ಮಾಪುರ ಒಡೆತನದ ಆರ್.ಬಿ. ಶುಗರ್ಸ್ ಸಕ್ಕರೆ ಕಾರ್ಖಾನೆಯಲ್ಲಿ ನವೆಂಬರ್ 20ರಿಂದ ಕಬ್ಬು ನುರಿಸುವ ಕಾರ್ಯ ಆರಂಭವಾಗಲಿದೆ ಎಂದು ಕಾರ್ಖಾನೆಯ ತಾಂತ್ರಿಕ ಉಪಾಧ್ಯಕ್ಷ ಎಸ್.ಆರ್. ಕುಂದರಗಿ ತಿಳಿಸಿದರು.

ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಖಾನೆಯಲ್ಲಿ ಕಬ್ಬು ನುರಿಸುವ ಪ್ರಕ್ರಿಯೆಗೆ ಅಗತ್ಯವಿರುವ ಎಲ್ಲ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗಿದೆ. ರೈತರಿಂದ ಕಬ್ಬು ಸಂಗ್ರಹಣೆ ಹಾಗೂ ಕಾರ್ಖಾನೆಯ ಕಾರ್ಯನಿರ್ವಹಣೆಗೆ ಸಂಬಂಧಿಸಿದ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಹೇಳಿದರು.

ರಾಯಚೂರು, ಯಾದಗಿರಿ, ಬಾಗಲಕೋಟೆ ಸೇರಿದಂತೆ ನಾಲ್ಕು ಜಿಲ್ಲೆಗಳ ಸುಮಾರು 40 ಸಾವಿರ ಕಬ್ಬು ಬೆಳೆಗಾರರು ಕಾರ್ಖಾನೆಯಲ್ಲಿ ನೋಂದಣಿ ಮಾಡಿಕೊಂಡಿದ್ದಾರೆ. ನೋಂದಾಯಿತ ರೈತರಿಗೆ ಉಚಿತವಾಗಿ ಕಬ್ಬಿನ ಬೀಜ ವಿತರಿಸಲಾಗಿದ್ದು, ರೈತರು ಕಬ್ಬು ಬೆಳೆದು ಕಾರ್ಖಾನೆಗೆ ಪೂರೈಸುವ ಮೂಲಕ ಸಹಕರಿಸಬೇಕು ಎಂದು ಮನವಿ ಮಾಡಿದರು.

ಆರ್.ಬಿ. ಶುಗರ್ಸ್ ಕಾರ್ಖಾನೆಯು ಪ್ರತಿದಿನ 5 ಸಾವಿರ ಟನ್ ಕಬ್ಬು ನುರಿಸುವ ಸಾಮರ್ಥ್ಯ ಹೊಂದಿದೆ. ಕಬ್ಬು ನುರಿಸುವ ಕಾರ್ಯವನ್ನು ಸುಗಮವಾಗಿ ನಡೆಸಲು ಅಗತ್ಯ ತಾಂತ್ರಿಕ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ರೈತರು ಬೆಳೆದ ಕಬ್ಬನ್ನು ಕಾರ್ಖಾನೆಗೆ ಪೂರೈಸುವುದರಿಂದ ಈ ಭಾಗದ ಕಬ್ಬು ಬೆಳೆಗಾರರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಕಾರ್ಖಾನೆಯಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸಲು ಆದ್ಯತೆ ನೀಡಲಾಗುತ್ತಿದೆ. ಈಗಾಗಲೇ ಜಿಲ್ಲೆಯ ಹಾಗೂ ತಾಲೂಕಿನ ಸುಮಾರು 40ರಿಂದ 50 ಸ್ಥಳೀಯ ಕಾರ್ಮಿಕರಿಗೆ ಉದ್ಯೋಗ ನೀಡಲಾಗಿದೆ. ಡಿಪ್ಲೊಮಾ ಹಾಗೂ ಎಂಜಿನಿಯರಿಂಗ್ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ಅಗತ್ಯ ತರಬೇತಿ ನೀಡಿ ಉದ್ಯೋಗಾವಕಾಶ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಾರ್ಖಾನೆ ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭ ಮಾಡಿದ ನಂತರ ಸುಮಾರು ಒಂದು ಸಾವಿರ ಜನರಿಗೆ ಉದ್ಯೋಗಾವಕಾಶ ಕಲ್ಪಿಸುವ ನಿರೀಕ್ಷೆಯಿದೆ. ಅಭ್ಯರ್ಥಿಗಳ ವಿದ್ಯಾರ್ಹತೆ ಹಾಗೂ ಕೆಲಸದ ಸ್ವರೂಪಕ್ಕೆ ಅನುಗುಣವಾಗಿ ವೇತನ ನಿಗದಿಪಡಿಸಲಾಗುವುದು. ನೇಮಕಾತಿಯಲ್ಲಿ ಸಾಧ್ಯವಾದಷ್ಟು ಸ್ಥಳೀಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ಕಾರ್ಖಾನೆಯ ಅಭಿವೃದ್ಧಿ ಹಾಗೂ ಸುಗಮ ಕಾರ್ಯನಿರ್ವಹಣೆಗೆ ರೈತರ ಸಹಕಾರ ಅತ್ಯಂತ ಅಗತ್ಯವಾಗಿದೆ. ಕಬ್ಬು ಬೆಳೆಗಾರರು ಕಾರ್ಖಾನೆಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ತಾವು ಬೆಳೆದ ಕಬ್ಬನ್ನು ಪೂರೈಸುವ ಮೂಲಕ ಈ ಭಾಗದ ಕೃಷಿ ಆಧಾರಿತ ಕೈಗಾರಿಕೆಯ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಎಸ್.ಆರ್. ಕುಂದರಗಿ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಕಬ್ಬು ಅಭಿವೃದ್ಧಿ ಮತ್ತು ಸಂಗ್ರಹಣೆ ವಿಭಾಗದ ಪ್ರಧಾನ ವ್ಯವಸ್ಥಾಪಕ ಬಿ.ಬಿ. ಪಾಟೀಲ್ ಹಾಗೂ ಸಹಸಂಚಾಲಕ ಅಮಿತ್ ಉಪಸ್ಥಿತರಿದ್ದರು.

ಪಂಚಮಸಾಲಿ ಸಮಾಜದ ಸಭಾಭವನ ನಿರ್ಮಾಣಕ್ಕೆ ₹25 ಲಕ್ಷ ಅನುದಾನ ನೀಡುವಂತೆ ಶಾಸಕ ಬಯ್ಯಾಪುರಗೆ ಮನವಿ



ಲಿಂಗಸುಗೂರು: ಪಟ್ಟಣದಲ್ಲಿ ಪಂಚಮಸಾಲಿ ಸಮಾಜದ ರಾಣಿ ಚೆನ್ನಮ್ಮ ಸಭಾಭವನ ನಿರ್ಮಾಣಕ್ಕೆ ₹25 ಲಕ್ಷ ಅನುದಾನ ಮಂಜೂರು ಮಾಡುವಂತೆ ಒತ್ತಾಯಿಸಿ ಸಮಾಜದ ಮುಖಂಡರು ರಾಯಚೂರು ಹಾಗೂ ಕೊಪ್ಪಳ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದಲ್ಲಿ ಪಂಚಮಸಾಲಿ ಸಮಾಜವು ಸ್ವಂತ ನಿವೇಶನ ಹೊಂದಿದ್ದು, ಈ ಸ್ಥಳದಲ್ಲಿ ಸಮಾಜದ ಸಭೆ, ಸಮಾರಂಭಗಳು ಹಾಗೂ ವಿವಿಧ ಸಾಮಾಜಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗುವಂತೆ ರಾಣಿ ಚೆನ್ನಮ್ಮ ಸಭಾಭವನ ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ಮುಖಂಡರು ತಿಳಿಸಿದರು.

ಸಭಾಭವನ ನಿರ್ಮಾಣಕ್ಕೆ ಅಗತ್ಯವಿರುವ ಆರ್ಥಿಕ ನೆರವು ಒದಗಿಸಲು ₹25 ಲಕ್ಷ ಅನುದಾನ ಮಂಜೂರು ಮಾಡಬೇಕು. ಇದರಿಂದ ಸಮಾಜದ ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲು ಅನುಕೂಲವಾಗಲಿದೆ ಎಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ರಾಜ್ಯ ಅಪೆಕ್ಸ್ ಬ್ಯಾಂಕ್‌ನ ಉಪಾಧ್ಯಕ್ಷರಾಗಿ ನೂತನವಾಗಿ ಆಯ್ಕೆಯಾಗಿರುವ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ ಅವರನ್ನು ಪಂಚಮಸಾಲಿ ಸಮಾಜದ ಮುಖಂಡರು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಮಹಾಂತೇಶ ಪಾಟೀಲ್ ಮುದಗಲ್, ತಾಲೂಕು ಅಧ್ಯಕ್ಷ ವಿಜಯಕುಮಾರ, ಸುಭಾಷ ಪಲ್ಲೇದ್, ಸಿ.ಸಿ. ಕರಡಕಲ್, ಮಹೇಶ ಶಂಕರಗೌಡ ಅಮರಾವತಿ, ಮಹಾಂತೇಶ ತಾವರಗೇರಾ, ಸಂಗಣ್ಣ ಆನೆಹೊಸೂರು, ಶ್ರೀಕಾಂತ, ವಿಜಯಲಕ್ಷ್ಮೀ ದೇಸಾಯಿ, ಶಿವಮ್ಮ ಸೇರಿದಂತೆ ಸಮಾಜದ ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

ನ್ಯುಮೋನಿಯಾ ತೊಲಗಿಸಿ, ಮಕ್ಕಳಿಗೆ ಆರೋಗ್ಯವಂತ ಬಾಲ್ಯ ಒದಗಿಸಿ: ಡಾ. ಸುನೀತಾ



ರಾಯಚೂರು, ನ.12: ನ್ಯುಮೋನಿಯಾ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ ರೋಗದ ತಡೆಗಟ್ಟುವಿಕೆ, ಆರಂಭಿಕ ಹಂತದಲ್ಲಿಯೇ ಪತ್ತೆ ಹಾಗೂ ಸೂಕ್ತ ಚಿಕಿತ್ಸೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಮಕ್ಕಳಿಗೆ ಆರೋಗ್ಯವಂತ ಬಾಲ್ಯ ಒದಗಿಸಬೇಕು ಎಂದು ಎಲ್‌ಬಿಎಸ್ ನಗರದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸುನೀತಾ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಎಲ್ ಬಿಎಸ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ನಮ್ಮ ಕ್ಲಿನಿಕ್‌ಗಳ ಸಂಯುಕ್ತಾಶ್ರಯದಲ್ಲಿ ಗುರುವಾರ ಯರಮರಸ್‌ನ ನಮ್ಮ ಕ್ಲಿನಿಕ್ ನಲ್ಲಿ ಆಯೋಜಿಸಿದ್ದ ವಿಶ್ವ ನ್ಯುಮೋನಿಯಾ ದಿನಾಚರಣೆ ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿವರ್ಷ ನವೆಂಬರ್ 12ರಂದು ವಿಶ್ವ ನ್ಯುಮೋನಿಯಾ ದಿನವನ್ನು ಆಚರಿಸಲಾಗುತ್ತದೆ. ನ್ಯುಮೋನಿಯಾ ರೋಗದ ಕುರಿತು ಜನರಲ್ಲಿ ಅರಿವು ಮೂಡಿಸುವುದು, ಅದರ ತಡೆಗಟ್ಟುವಿಕೆ ಮತ್ತು ಚಿಕಿತ್ಸೆಯ ಮಹತ್ವವನ್ನು ತಿಳಿಸುವುದು ಹಾಗೂ ರೋಗದಿಂದ ಉಂಟಾಗುವ ಸಾವುಗಳನ್ನು ಕಡಿಮೆ ಮಾಡುವುದು ಈ ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ವಿಶೇಷವಾಗಿ ಐದು ವರ್ಷದೊಳಗಿನ ಮಕ್ಕಳು ಹಾಗೂ ವಯೋವೃದ್ಧರಲ್ಲಿ ನ್ಯುಮೋನಿಯಾ ಗಂಭೀರ ಪರಿಣಾಮ ಉಂಟುಮಾಡುವ ಸಾಧ್ಯತೆಯಿದೆ. ಆದ್ದರಿಂದ ರೋಗದ ಲಕ್ಷಣಗಳನ್ನು ನಿರ್ಲಕ್ಷಿಸದೆ, ಸಕಾಲದಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆಯುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಕೆಮ್ಮು, ಜ್ವರ, ಬೆವರುವಿಕೆ, ಚಳಿ, ಉಸಿರಾಟದ ತೊಂದರೆ, ವೇಗವಾಗಿ ಉಸಿರಾಡುವುದು ಹಾಗೂ ಎದೆನೋವು ನ್ಯುಮೋನಿಯಾದ ಸಾಮಾನ್ಯ ಲಕ್ಷಣಗಳಾಗಿವೆ. ಆರಂಭದಲ್ಲಿ ಒಣಕೆಮ್ಮು ಕಾಣಿಸಿಕೊಂಡು ನಂತರ ಕಫದೊಂದಿಗೆ ಕೆಮ್ಮು ಉಂಟಾಗಬಹುದು. ಇಂತಹ ಲಕ್ಷಣಗಳು ಕಂಡುಬಂದಾಗ ವೈದ್ಯರನ್ನು ಸಂಪರ್ಕಿಸಬೇಕು ಎಂದು ಸಲಹೆ ನೀಡಿದರು.

ಮಕ್ಕಳಲ್ಲಿ ವೇಗವಾದ ಉಸಿರಾಟ, ಉಸಿರಾಡುವಾಗ ಎದೆಯ ಕೆಳಭಾಗ ಒಳಗೆ ಎಳೆಯುವುದು, ಆಹಾರ ಅಥವಾ ನೀರು ಸೇವಿಸಲು ತೊಂದರೆ, ನಿರ್ಜಲೀಕರಣ ಹಾಗೂ ಅತಿಯಾದ ಕಿರಿಕಿರಿಯಂತಹ ಲಕ್ಷಣಗಳು ಕಂಡುಬರಬಹುದು. ಇಂತಹ ಸಂದರ್ಭದಲ್ಲಿ ವಿಳಂಬ ಮಾಡದೆ ಸಮೀಪದ ಆರೋಗ್ಯ ಕೇಂದ್ರಕ್ಕೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಬೇಕು ಎಂದು ತಿಳಿಸಿದರು.

ಯರಮರಸ್‌ನಮ್ಮಕ್ಲಿನಿಕ್‌ನವೈದ್ಯಾಧಿಕಾರಿ ಡಾ. ಸಫೀಯಾ ಮಾತನಾಡಿ, ನ್ಯುಮೋನಿಯಾ ಶ್ವಾಸಕೋಶಗಳಿಗೆ ಸೋಂಕು ಉಂಟುಮಾಡುವ ಉಸಿರಾಟದ ಕಾಯಿಲೆಯಾಗಿದೆ. ಬ್ಯಾಕ್ಟೀರಿಯಾ, ವೈರಸ್ ಅಥವಾ ಶಿಲೀಂಧ್ರಗಳ ಸೋಂಕಿನಿಂದ ಈ ಕಾಯಿಲೆ ಉಂಟಾಗಬಹುದು. ಇದರಿಂದ ಶ್ವಾಸಕೋಶಗಳ ಕಾರ್ಯನಿರ್ವಹಣೆಗೆ ತೊಂದರೆಯಾಗಿ ಉಸಿರಾಟದ ಸಮಸ್ಯೆ ಕಾಣಿಸಿಕೊಳ್ಳುತ್ತದೆ ಎಂದು ವಿವರಿಸಿದರು.

ನ್ಯುಮೋನಿಯಾ ಕುರಿತು ಸಾರ್ವಜನಿಕರು, ವಿಶೇಷವಾಗಿ ಗರ್ಭಿಣಿಯರು ಹಾಗೂ ಚಿಕ್ಕಮಕ್ಕಳ ಪಾಲಕರು ಹೆಚ್ಚಿನ ಅರಿವು ಹೊಂದಿರಬೇಕು. ಮಕ್ಕಳ ಆರೋಗ್ಯದ ಬಗ್ಗೆ ನಿರಂತರ ಕಾಳಜಿ ವಹಿಸುವುದರ ಜೊತೆಗೆ ರೋಗಲಕ್ಷಣಗಳು ಕಂಡುಬಂದಲ್ಲಿ ತಕ್ಷಣ ವೈದ್ಯಕೀಯ ಸಲಹೆ ಪಡೆಯಬೇಕು ಎಂದು ಹೇಳಿದರು.

ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ. ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಬಿಬ್ಬಿ, ಬಾಚಯ್ಯ, ಸುನೀತಾ, ಶ್ವೇತಾ, ಸುಜಾತಾ, ವೀರೇಶ, ನಮ್ಮ ಕ್ಲಿನಿಕ್ ಸಿಬ್ಬಂದಿ ಹಾಗೂ ಗರ್ಭಿಣಿಯರು ಉಪಸ್ಥಿತರಿದ್ದರು.

ಏಳು ತಿಂಗಳ ಬಾಕಿ ವೇತನಕ್ಕಾಗಿ ಜಾಲಹಳ್ಳಿ ಗ್ರಾಪಂ ನೌಕರರ ಪ್ರತಿಭಟನೆ; ಅಧಿಕಾರಿಗಳ ಲಿಖಿತ ಭರವಸೆ ಮೇರೆಗೆ ಹೋರಾಟ ವಾಪಸ್



ಜಾಲಹಳ್ಳಿ, ನ.12: ಕಳೆದ ಏಳು ತಿಂಗಳಿನಿಂದ ತಾಂತ್ರಿಕ ದೋಷದಿಂದಾಗಿ ಸ್ಥಗಿತಗೊಂಡಿರುವ ವೇತನ ಹಾಗೂ ಈ ಹಿಂದಿನ 12 ತಿಂಗಳ ಬಾಕಿ ವೇತನವನ್ನು ಕೂಡಲೇ ಪಾವತಿಸುವಂತೆ ಆಗ್ರಹಿಸಿ ಗ್ರಾಮ ಪಂಚಾಯಿತಿ ನೌಕರರು ಗುರುವಾರ ಸಿಐಟಿಯು ನೇತೃತ್ವದಲ್ಲಿ ಗ್ರಾಮ ಪಂಚಾಯಿತಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಕಳೆದ ಏಳು ತಿಂಗಳಿನಿಂದ ತಾಂತ್ರಿಕ ಸಮಸ್ಯೆಯಿಂದ ವೇತನ ಪಾವತಿಯಾಗಿಲ್ಲ. ಇದರಿಂದ ನೌಕರರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುವಂತಾಗಿದೆ. ಕುಟುಂಬ ನಿರ್ವಹಣೆ ಹಾಗೂ ದೈನಂದಿನ ಜೀವನಾವಶ್ಯಕ ಖರ್ಚುಗಳನ್ನು ಭರಿಸಲು ತೊಂದರೆಯಾಗುತ್ತಿದೆ ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು.

ತಾಂತ್ರಿಕ ದೋಷದಿಂದ ಸ್ಥಗಿತಗೊಂಡಿರುವ ಏಳು ತಿಂಗಳ ವೇತನವನ್ನು ತಕ್ಷಣ ಬಿಡುಗಡೆ ಮಾಡಬೇಕು. ಇದರೊಂದಿಗೆ ಈ ಹಿಂದೆ ಬಾಕಿ ಉಳಿದಿರುವ 12 ತಿಂಗಳ ವೇತನವನ್ನೂ ಪಾವತಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ಅಂಬರೀಶ್ ಕುಂಬಾರ್ ಅವರು ನೌಕರರ ಮನವಿ ಸ್ವೀಕರಿಸಿ, ಪ್ರತಿಭಟನಾಕಾರರೊಂದಿಗೆ ಮಾತುಕತೆ ನಡೆಸಿದರು.

ತಾಂತ್ರಿಕ ದೋಷವನ್ನು ಸರಿಪಡಿಸಿ, ಸ್ಥಗಿತಗೊಂಡಿರುವ ಏಳು ತಿಂಗಳ ವೇತನವನ್ನು 20 ದಿನಗಳೊಳಗೆ ಪಾವತಿಸಲು ಕ್ರಮ ಕೈಗೊಳ್ಳುವುದಾಗಿ ಲಿಖಿತ ಭರವಸೆ ನೀಡಿದರು. ಅಧಿಕಾರಿಗಳ ಭರವಸೆಯ ಹಿನ್ನೆಲೆಯಲ್ಲಿ ನೌಕರರು ತಾತ್ಕಾಲಿಕವಾಗಿ ಪ್ರತಿಭಟನೆಯನ್ನು ಹಿಂಪಡೆದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸುನೀಲ್ ಕುಮಾರ್, ಪಂಚಾಯಿತಿ ನೌಕರರ ಸಂಘಟನೆಯ ಗೌರವಾಧ್ಯಕ್ಷ ಗಿರಿಯಪ್ಪ ಪೂಜಾರಿ, ಪದಾಧಿಕಾರಿಗಳಾದ ವೆಂಕೋಬ, ಕಾಶಿಲಿಂಗ, ಮುದ್ದುರಂಗಪ್ಪ, ಶೋಯಲ್, ನಾಗರತ್ನ, ಚನ್ನಮ್ಮ, ನಿಂಗಮ್ಮ ಸೇರಿದಂತೆ ಹಲವಾರು ನೌಕರರು ಉಪಸ್ಥಿತರಿದ್ದರು.

ಮಾನ್ವಿ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆ ಪರಿಷ್ಕರಣೆ: ಆಕ್ಷೇಪಣೆ ಸಲ್ಲಿಸಲು ಅವಕಾಶ

ರಾಯಚೂರು, ನ.12 (ಕರ್ನಾಟಕ ವಾರ್ತೆ): ಜಿಲ್ಲೆಯ ಮಾನ್ವಿ ಉಪನೋಂದಣಿ ಕಚೇರಿ ವ್ಯಾಪ್ತಿಗೆ ಒಳಪಡುವ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆಯನ್ನು 2026-27ನೇ ಸಾಲಿನಿಂದ ಜಾರಿಗೆ ಬರುವಂತೆ ಪರಿಷ್ಕರಿಸಲಾಗಿದ್ದು, ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ನವೆಂಬರ್ 9ರಂದು ನಡೆದ ಮಾನ್ವಿ ಮಾರುಕಟ್ಟೆ ಮೌಲ್ಯ ನಿರ್ಧರಣಾ ಉಪಸಮಿತಿ ಸಭೆಯಲ್ಲಿ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆಗಳನ್ನು ಪರಿಶೀಲಿಸಿ, ಪರಿಷ್ಕೃತ ಬೆಲೆ ಪಟ್ಟಿಯನ್ನು ನಿರ್ಧರಿಸಲಾಗಿದೆ.

ಪರಿಷ್ಕೃತ ಮಾರ್ಗಸೂಚಿ ಬೆಲೆಗಳ ಕರಡು ಪಟ್ಟಿಯನ್ನು ಸಾರ್ವಜನಿಕರ ಮಾಹಿತಿ ಹಾಗೂ ಆಕ್ಷೇಪಣೆಗಳಿಗಾಗಿ ರಾಯಚೂರು ಹಿರಿಯ ಉಪನೋಂದಣಿ ಕಚೇರಿಯಲ್ಲಿ ಪ್ರಕಟಿಸಲಾಗಿದೆ.

ಈ ಮಾರ್ಗಸೂಚಿ ಬೆಲೆಗಳ ಕುರಿತು ಸಾರ್ವಜನಿಕರಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗೆ ಸಂಬಂಧಪಟ್ಟ ಉಪನೋಂದಣಾಧಿಕಾರಿಗಳಿಗೆ ಲಿಖಿತವಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಸಾರ್ವಜನಿಕರು ಕರಡು ಬೆಲೆ ಪಟ್ಟಿಯನ್ನು ಪರಿಶೀಲಿಸಿ, ಆಕ್ಷೇಪಣೆಗಳಿದ್ದಲ್ಲಿ ನಿಗದಿತ ಅವಧಿಯೊಳಗೆ ಸಲ್ಲಿಸಬೇಕು ಎಂದು ಮಾನ್ವಿ ಸ್ಥಿರಾಸ್ತಿ ಮೌಲ್ಯಮಾಪನ ಉಪಸಮಿತಿಯ ಉಪನೋಂದಣಾಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾರ್ವಜನಿಕ ಶೌಚಾಲಯಕ್ಕೆ ಮೂಲಸೌಕರ್ಯ ಕಲ್ಪಿಸಿ: ಮಾಜಿ ನಗರಸಭೆ ಸದಸ್ಯ ಶಂಶಾಲಂ ಆಗ್ರಹ



ರಾಯಚೂರು: ನಗರದ ಹೊರವಲಯದ ವಾರ್ಡ್ ಸಂಖ್ಯೆ 33ರ ಯರಮರಸ್ ಹಳೆ ಗ್ರಾಮದಲ್ಲಿ ನಿರ್ಮಿಸಲಾದ ಸಾರ್ವಜನಿಕ ಶೌಚಾಲಯಕ್ಕೆ ಸಮರ್ಪಕ ನೀರಿನ ವ್ಯವಸ್ಥೆ ಹಾಗೂ ಸ್ವಚ್ಛತಾ ಸಿಬ್ಬಂದಿ ಇಲ್ಲದ ಕಾರಣ ಕಟ್ಟಡ ಸಾರ್ವಜನಿಕರ ಬಳಕೆಗೆ ಬಾರದೆ ನಿರುಪಯುಕ್ತವಾಗಿದೆ ಎಂದು ಮಾಜಿ ನಗರಸಭೆ ಸದಸ್ಯ ಶಂಶಾಲಂ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಯರಮರಸ್ ಹಳೆ ಗ್ರಾಮದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಹಲವು ವರ್ಷಗಳ ಹಿಂದೆಯೇ ಶೌಚಾಲಯ ಕಟ್ಟಡ ನಿರ್ಮಿಸಲಾಗಿದೆ. ಕಟ್ಟಡಕ್ಕೆ ಸುಣ್ಣಬಣ್ಣ ಬಳಿಯುವ ಕೆಲಸ ನಡೆದಿದ್ದರೂ, ಅಗತ್ಯ ಮೂಲಸೌಕರ್ಯಗಳನ್ನು ಒದಗಿಸದ ಕಾರಣ ಇದುವರೆಗೂ ಸಾರ್ವಜನಿಕರಿಗೆ ಉಪಯೋಗವಾಗುತ್ತಿಲ್ಲ ಎಂದು ದೂರಿದ್ದಾರೆ.

ಶೌಚಾಲಯದಲ್ಲಿ ನಿರಂತರ ನೀರು ಪೂರೈಕೆಯ ವ್ಯವಸ್ಥೆ ಕಲ್ಪಿಸಿಲ್ಲ. ಕಟ್ಟಡದ ಸ್ವಚ್ಛತೆ ಮತ್ತು ನಿರ್ವಹಣೆಗೆ ಪೌರಕಾರ್ಮಿಕರನ್ನೂ ನಿಯೋಜಿಸಿಲ್ಲ. ಇದರಿಂದ ಸಾರ್ವಜನಿಕರು ಶೌಚಾಲಯವನ್ನು ಬಳಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತಿಳಿಸಿದ್ದಾರೆ.

ಶೌಚಾಲಯದ ಸುತ್ತಮುತ್ತ ಗಿಡಗಂಟಿಗಳು ಹಾಗೂ ಮುಳ್ಳಿನ ಪೊದೆಗಳು ಬೆಳೆದು ನಿಂತಿವೆ. ಆವರಣವನ್ನು ಸ್ವಚ್ಛಗೊಳಿಸುವ ಕಾರ್ಯವೂ ನಡೆದಿಲ್ಲ. ಸಾರ್ವಜನಿಕರ ಅಗತ್ಯಕ್ಕಾಗಿ ನಿರ್ಮಿಸಿದ ಕಟ್ಟಡದ ನಿರ್ವಹಣೆಗೆ ಸಂಬಂಧಪಟ್ಟ ಮಹಾನಗರ ಪಾಲಿಕೆ ಅಧಿಕಾರಿಗಳು ಗಮನಹರಿಸದಿರುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಇದಲ್ಲದೆ, ವಾರ್ಡ್‌ನ ವಿವಿಧ ಗಲ್ಲಿಗಳಲ್ಲಿ ಚರಂಡಿಗಳ ಸ್ವಚ್ಛತೆ ಹಾಗೂ ಸಾರ್ವಜನಿಕ ರಸ್ತೆಗಳ ಮೇಲಿನ ಕಸ ವಿಲೇವಾರಿಗೆ ಸಮರ್ಪಕ ವ್ಯವಸ್ಥೆ ಕಲ್ಪಿಸುವ ಅಗತ್ಯವಿದೆ. ಸ್ವಚ್ಛತಾ ಕಾರ್ಯಗಳನ್ನು ನಿಯಮಿತವಾಗಿ ಕೈಗೊಳ್ಳಲು ಅಗತ್ಯ ಸಂಖ್ಯೆಯ ಪೌರಕಾರ್ಮಿಕರನ್ನು ನಿಯೋಜಿಸಬೇಕು ಎಂದು ಒತ್ತಾಯಿಸಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆ ಆಯುಕ್ತರು ಯರಮರಸ್ ಗ್ರಾಮದ ಸಾರ್ವಜನಿಕ ಶೌಚಾಲಯದ ಸ್ಥಿತಿಗತಿಯನ್ನು ಖುದ್ದಾಗಿ ಪರಿಶೀಲಿಸಿ, ನೀರಿನ ಸಂಪರ್ಕ, ಸ್ವಚ್ಛತಾ ಸಿಬ್ಬಂದಿ ಹಾಗೂ ಅಗತ್ಯ ನಿರ್ವಹಣಾ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು. ಶೌಚಾಲಯವನ್ನು ಶೀಘ್ರವೇ ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸುವುದರ ಜೊತೆಗೆ ವಾರ್ಡ್‌ನ ಚರಂಡಿ ಮತ್ತು ಕಸ ವಿಲೇವಾರಿ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಮಾಜಿ ನಗರಸಭೆ ಸದಸ್ಯ ಶಂಶಾಲಂ ಆಗ್ರಹಿಸಿದ್ದಾರೆ.

ಪೋತ್ನಾಳ ಹಿರೇಹಳ್ಳಕ್ಕೆ ಕುಡಿಯುವ ನೀರು ಹರಿಸಲು ಆಗ್ರಹಿಸಿ ರೈತ ಸಂಘದಿಂದ ಪ್ರತಿಭಟನೆ



ಮಾನ್ವಿ: ಬರಗಾಲದ ಹಿನ್ನೆಲೆಯಲ್ಲಿ ಪೋತ್ನಾಳ ಹಿರೇಹಳ್ಳದ ವ್ಯಾಪ್ತಿಯ 36ಕ್ಕೂ ಹೆಚ್ಚು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದ್ದು, ಜನರು ಹಾಗೂ ಜಾನುವಾರುಗಳಿಗೆ ನೀರಿನ ಸೌಲಭ್ಯ ಕಲ್ಪಿಸಲು ಕೂಡಲೇ ಹಿರೇಹಳ್ಳಕ್ಕೆ ನೀರು ಹರಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ತಾಲೂಕಿನ ಸಿಂಧನೂರು ರಸ್ತೆಯ ಬಳಗನೂರು ಕ್ರಾಸ್‌ನಲ್ಲಿ ಜಮಾಯಿಸಿದ ರೈತರು ಹಾಗೂ ಗ್ರಾಮಸ್ಥರು, ಪೋತ್ನಾಳ ಹಿರೇಹಳ್ಳಕ್ಕೆ ನೀರು ಹರಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು. ಬಳಿಕ ಸ್ಥಳಕ್ಕೆ ಆಗಮಿಸಿದ ಸಿಂಧನೂರು ತಹಶೀಲ್ದಾರ್ ಅರುಣಕುಮಾರ್ ದೇಸಾಯಿ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಅಮೀನ್ ಪಾಷಾ ದಿದ್ದಿಗಿ, ಪೋತ್ನಾಳ ಹಿರೇಹಳ್ಳದ ವ್ಯಾಪ್ತಿಗೆ ಒಳಪಡುವ 36ಕ್ಕೂ ಹೆಚ್ಚು ಗ್ರಾಮಗಳಲ್ಲಿ ಬರಗಾಲದಿಂದಾಗಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದೆ. ಜನರು ಹಾಗೂ ಜಾನುವಾರುಗಳಿಗೆ ಅಗತ್ಯವಿರುವ ನೀರಿನ ಸೌಲಭ್ಯ ದೊರೆಯದೆ ಗ್ರಾಮೀಣ ಭಾಗದ ನಿವಾಸಿಗಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.

ಮಳೆ ಕೊರತೆಯಿಂದಾಗಿ ಹಳ್ಳದಲ್ಲಿ ನೀರಿನ ಹರಿವು ಕಡಿಮೆಯಾಗಿದ್ದು, ಅಂತರ್ಜಲ ಮಟ್ಟವೂ ಕುಸಿಯುತ್ತಿದೆ. ಇದರಿಂದ ಕೊಳವೆಬಾವಿಗಳಲ್ಲಿ ನೀರಿನ ಲಭ್ಯತೆ ಕಡಿಮೆಯಾಗುವ ಆತಂಕ ಎದುರಾಗಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಸ್ಕಿ, ಬಸಾಪುರ ಹಾಗೂ ಗೂಗೆಬಾಳ ಎಸ್ಕೇಪ್‌ಗಳ ಮೂಲಕ ಪೋತ್ನಾಳ ಹಿರೇಹಳ್ಳಕ್ಕೆ ನೀರು ಹರಿಸಿದರೆ ಹಳ್ಳದ ವ್ಯಾಪ್ತಿಯ ಗ್ರಾಮಗಳಿಗೆ ಕುಡಿಯುವ ನೀರಿನ ಸಮಸ್ಯೆ ನಿವಾರಣೆಯಾಗುವುದರ ಜೊತೆಗೆ ಕೊಳವೆಬಾವಿಗಳ ಅಂತರ್ಜಲ ಮಟ್ಟ ಹೆಚ್ಚಳವಾಗಲು ಸಹಕಾರಿಯಾಗಲಿದೆ. ಆದ್ದರಿಂದ ವಿಳಂಬ ಮಾಡದೆ ಹಿರೇಹಳ್ಳಕ್ಕೆ ನೀರು ಹರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಸಿಂಧನೂರು ತಹಶೀಲ್ದಾರ್ ಅರುಣಕುಮಾರ್ ದೇಸಾಯಿ ಅವರು ರೈತರ ಮನವಿ ಸ್ವೀಕರಿಸಿ, ಪ್ರತಿಭಟನಾಕಾರರೊಂದಿಗೆ ಮಾತುಕತೆ ನಡೆಸಿದರು.

ಈ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ, ಮುಂದಿನ ಎರಡು ಮೂರು ದಿನಗಳೊಳಗೆ ಪೋತ್ನಾಳ ಹಿರೇಹಳ್ಳಕ್ಕೆ ನೀರು ಹರಿಸುವ ವ್ಯವಸ್ಥೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಅಧಿಕಾರಿಗಳ ಭರವಸೆಗೆ ಸ್ಪಂದಿಸಿದ ರೈತ ಮುಖಂಡರು, ಗ್ರಾಮೀಣ ಭಾಗದ ಜನರು ಹಾಗೂ ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ತ್ವರಿತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಬಸವರಾಜ ಗುಡಿಹಾಳ, ದುರುಗಪ್ಪ ತಡಕಲ್, ನಾಗನಗೌಡ ಖರಬದಿನ್ನಿ, ಆದಪ್ಪ ಸಾಹುಕಾರ ದಿದ್ದಿಗಿ, ಚೆನ್ನನಗೌಡ ಬನ್ನಿಗನೂರು, ಯಲ್ಲಪ್ಪ ಉಟಕನೂರು, ಪಾರ್ಶ್ವನಾಥ ಗೌಡ, ಮಲ್ಲೇಶಪ್ಪ ದೇವರಮನಿ, ಬಸಲಿಂಗಪ್ಪ, ಗಿರಿ ರೆಡ್ಡಿ, ಶಿವಕುಮಾರ, ರಾಮು ನಾಯಕ, ಶರಣಕುಮಾರ ಮುದ್ದಂಗುಡ್ಡಿ, ಹುಲುಗಪ್ಪ ದಿದ್ದಿಗಿ, ದೇವಪ್ಪ ರಾಮತ್ನಾಳ ಸೇರಿದಂತೆ ವಿವಿಧ ಗ್ರಾಮಗಳ ನೂರಾರು ರೈತರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

ಮಕ್ಕಳ ಆರೋಗ್ಯ ರಕ್ಷಣೆಗೆ ಸಕಾಲಿಕ ಲಸಿಕೆ ಅಗತ್ಯ: ಅರವಿಂದ ಕುಮಾರ



ಗಿಲ್ಲೆಸೂಗೂರು, ನ.12: ಮಕ್ಕಳನ್ನು ಸಾಂಕ್ರಾಮಿಕ ಹಾಗೂ ಮಾರಣಾಂತಿಕ ಕಾಯಿಲೆಗಳಿಂದ ರಕ್ಷಿಸಲು ನಿಗದಿತ ವೇಳಾಪಟ್ಟಿಯಂತೆ ಲಸಿಕೆಗಳನ್ನು ಹಾಕಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಮಟಮಾರಿ ಆರೋಗ್ಯ ಕೇಂದ್ರದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದ ಕುಮಾರ ಹೇಳಿದರು.

ಸಮೀಪದ ತುಂಗಭದ್ರಾ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗಿಲ್ಲೆಸೂಗೂರು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಲಸಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿವರ್ಷ ನವೆಂಬರ್ 10ರಂದು ವಿಶ್ವ ಲಸಿಕಾ ದಿನವನ್ನು ಆಚರಿಸಲಾಗುತ್ತದೆ. ಲಸಿಕೆಗಳ ಮೂಲಕ ತಡೆಗಟ್ಟಬಹುದಾದ ರೋಗಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಹಾಗೂ ಮಕ್ಕಳು ಮತ್ತು ಗರ್ಭಿಣಿಯರಿಗೆ ಸಕಾಲದಲ್ಲಿ ಲಸಿಕೆ ನೀಡುವ ಮಹತ್ವವನ್ನು ತಿಳಿಸುವುದು ಈ ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ ಎಂದು ವಿವರಿಸಿದರು.

ಲಸಿಕೆಗಳು ತಾಯಿ ಮತ್ತು ಮಗುವಿನ ಆರೋಗ್ಯ ರಕ್ಷಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ತಾಯಿ ಮತ್ತು ಶಿಶು ಮರಣ ಪ್ರಮಾಣವನ್ನು ಕಡಿಮೆ ಮಾಡುವಲ್ಲಿಯೂ ಲಸಿಕಾಕರಣ ಸಹಕಾರಿಯಾಗಿದೆ. ಮಗುವಿನ ಜನನದಿಂದಲೇ ಸರ್ಕಾರ ನಿಗದಿಪಡಿಸಿರುವ ಲಸಿಕಾ ವೇಳಾಪಟ್ಟಿಯಂತೆ ಎಲ್ಲ ಲಸಿಕೆಗಳನ್ನು ತಪ್ಪದೇ ಹಾಕಿಸಬೇಕು. ಗರ್ಭಿಣಿಯರು ಆರೋಗ್ಯ ಇಲಾಖೆಯ ಸಲಹೆಯಂತೆ ಅಗತ್ಯ ಲಸಿಕೆಗಳನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಪೋಲಿಯೊ, ದಡಾರ, ಕಾಮಾಲೆ, ಬಾಲಕ್ಷಯ ಸೇರಿದಂತೆ ಲಸಿಕೆಗಳ ಮೂಲಕ ತಡೆಗಟ್ಟಬಹುದಾದ 12 ಅಪಾಯಕಾರಿ ರೋಗಗಳಿಂದ ಮಕ್ಕಳನ್ನು ರಕ್ಷಿಸಲು ಲಸಿಕಾಕರಣ ನೆರವಾಗುತ್ತದೆ. ಯಾವುದೇ ಲಸಿಕೆಯನ್ನು ತಪ್ಪಿಸದೆ ಪೂರ್ಣ ಪ್ರಮಾಣದಲ್ಲಿ ಲಸಿಕೆ ಹಾಕಿಸುವುದು ಪ್ರತಿಯೊಬ್ಬ ಪಾಲಕರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಶಶಿಕಲಾ ಮಾತನಾಡಿ, 1974ರಿಂದ ಈಚೆಗೆ ಲಸಿಕಾಕರಣದ ಪರಿಣಾಮವಾಗಿ ವಿಶ್ವದಾದ್ಯಂತ 15 ಕೋಟಿಗೂ ಹೆಚ್ಚು ಜೀವಗಳನ್ನು ಉಳಿಸಲಾಗಿದೆ. ಮಕ್ಕಳಿಗೆ ಅಗತ್ಯವಿರುವ ಎಲ್ಲ ಲಸಿಕೆಗಳನ್ನು ಸಕಾಲದಲ್ಲಿ ಕೊಡಿಸುವ ಮೂಲಕ ಆರೋಗ್ಯವಂತ ಭವಿಷ್ಯದ ಪೀಳಿಗೆಯನ್ನು ರೂಪಿಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಆರೋಗ್ಯ ನಿರೀಕ್ಷಣಾಧಿಕಾರಿ ಅರುಣ ಕುಮಾರ ಮಾತನಾಡಿ, ಲಸಿಕೆಗಳ ಕುರಿತು ಸಮಾಜದಲ್ಲಿ ಇರುವ ತಪ್ಪು ಕಲ್ಪನೆಗಳನ್ನು ದೂರಮಾಡಿ ವೈಜ್ಞಾನಿಕ ಅರಿವು ಬೆಳೆಸುವುದು ಅಗತ್ಯವಾಗಿದೆ. ಪಾಲಕರು ತಮ್ಮ ಮಕ್ಕಳ ಲಸಿಕಾ ಕಾರ್ಡ್‌ಗಳನ್ನು ನಿಯಮಿತವಾಗಿ ಪರಿಶೀಲಿಸಿ, ನಿಗದಿತ ದಿನಾಂಕಗಳಂದು ಲಸಿಕೆಗಳನ್ನು ಹಾಕಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರಾದ ಮಣಿರಮ್ಮ, ಸುಶೀಲಾ, ಆಶಾ ಕಾರ್ಯಕರ್ತೆ ಜ್ಯೋತಿ ಹಾಗೂ ಮಕ್ಕಳ ತಾಯಂದಿರು ಉಪಸ್ಥಿತರಿದ್ದರು.

ನ.14ರಂದು ದೇವದುರ್ಗದಲ್ಲಿ ರೈತರ ಬೃಹತ್ ಪ್ರತಿಭಟನೆ



ದೇವದುರ್ಗ: ನಾರಾಯಣಪುರ ಬಲದಂಡೆ ಕಾಲುವೆಗೆ ಸಮರ್ಪಕವಾಗಿ ನೀರು ಹರಿಸಿ ಒಣಗುತ್ತಿರುವ ಬೆಳೆಗಳನ್ನು ರಕ್ಷಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ನವೆಂಬರ್ 14ರಂದು ಪಟ್ಟಣದಲ್ಲಿ ರೈತರ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘಟನೆಯ ತಾಲೂಕು ಅಧ್ಯಕ್ಷ ಮರಿಲಿಂಗ ಪಾಟೀಲ್ ತಿಳಿಸಿದರು.

ಪಟ್ಟಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಘಟನೆಯ ಜಿಲ್ಲಾಧ್ಯಕ್ಷ ಮಲ್ಲೇಶ್ ನಾಯಕ್ ಗೌರಂಪೇಟೆ ಅವರ ಒಪ್ಪಿಗೆಯೊಂದಿಗೆ, ತಮ್ಮ ಅಧ್ಯಕ್ಷತೆಯಲ್ಲಿ ಹಾಗೂ ರೈತ ನಾಯಕ ಕೋಡಿಹಳ್ಳಿ ಚಂದ್ರಶೇಖರ ಅವರ ನೇತೃತ್ವದಲ್ಲಿ ಪ್ರತಿಭಟನೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

ನಾರಾಯಣಪುರ ಬಲದಂಡೆ ಕಾಲುವೆಯನ್ನು ಅವಲಂಬಿಸಿರುವ ರೈತರು ನೀರಿನ ಕೊರತೆಯಿಂದ ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಬೆಳೆಗಳಿಗೆ ಅಗತ್ಯವಿರುವ ಸಮಯದಲ್ಲಿ ನೀರು ದೊರೆಯದ ಕಾರಣ ಕೃಷಿ ಚಟುವಟಿಕೆಗಳಿಗೆ ಅಡ್ಡಿಯಾಗಿದ್ದು, ಬೆಳೆಗಳು ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ರೈತರು ಆರ್ಥಿಕ ನಷ್ಟದ ಆತಂಕದಲ್ಲಿದ್ದಾರೆ ಎಂದು ಹೇಳಿದರು.

ಕ ್ ೃ ಷಿ ಯ ಂ ನ ್ ೇ ಜೀ ವ ನಾ ಧಾ ರ ವಾ ಗಿ ಸಿ ಕೊ ಂ ಡಿ ರ ುವ ಕುಟುಂಬಗಳಿಗೆ ನೀರಾವರಿ ಸೌಲಭ್ಯ ಅತ್ಯಂತ ಅಗತ್ಯವಾಗಿದೆ. ಕಾಲುವೆಗೆ ಸಮರ್ಪಕವಾಗಿ ನೀರು ಹರಿಸದಿದ್ದರೆ ರೈತರು ಬೆಳೆ ಉಳಿಸಿಕೊಳ್ಳುವುದು ಕಷ್ಟವಾಗಲಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ರೈತರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಕಾಲುವೆಗೆ ನೀರು ಹರಿಸಲು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಂಘಟಿತ ಹೋರಾಟ ಅನಿವಾರ್ಯವಾಗಿದೆ. ನೀರಾವರಿ ಸೌಲಭ್ಯಕ್ಕಾಗಿ ನಡೆಯುತ್ತಿರುವ ಈ ಹೋರಾಟವು ಕೇವಲ ಒಂದು ಪ್ರದೇಶದ ರೈತರಿಗೆ ಸೀಮಿತವಾಗದೆ, ಕೃಷಿಯನ್ನು ಅವಲಂಬಿಸಿರುವ ಎಲ್ಲ ಕುಟುಂಬಗಳ ಹಿತಾಸಕ್ತಿಗೆ ಸಂಬಂಧಿಸಿದೆ ಎಂದು ಅಭಿಪ್ರಾಯಪಟ್ಟರು.

ನವೆಂಬರ್ 14ರಂದು ನಡೆಯಲಿರುವ ಪ್ರತಿಭಟನೆಯಲ್ಲಿ ದೇವದುರ್ಗ ತಾಲೂಕಿನ ರೈತರು, ಸಾರ್ವಜನಿಕರು, ವ್ಯಾಪಾರಸ್ಥರು ಹಾಗೂ ವಿವಿಧ ರೈತಪರ ಸಂಘಟನೆಗಳ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ಪಕ್ಷ, ಜಾತಿ ಹಾಗೂ ಇತರ ಭೇದಭಾವಗಳನ್ನು ಬದಿಗಿಟ್ಟು ರೈತರ ಹಿತಕ್ಕಾಗಿ ಒಗ್ಗಟ್ಟಿನಿಂದ ಹೋರಾಟ ನಡೆಸಬೇಕು ಎಂದು ಮನವಿ ಮಾಡಿದರು.

ರೈತರ ಹಕ್ಕಿನ ನೀರು ದೊರೆಯುವವರೆಗೂ ಹೋರಾಟ ಮುಂದುವರಿಸುವ ಅಗತ್ಯವಿದೆ. ಕೃಷಿ ಮತ್ತು ರೈತ ಕುಟುಂಬಗಳ ಭವಿಷ್ಯವನ್ನು ರಕ್ಷಿಸುವ ಉದ್ದೇಶದಿಂದ ಈ ಪ್ರತಿಭಟನೆ ಆಯೋಜಿಸಲಾಗಿದೆ ಎಂದು ಸಂಘಟನೆಯ ಮುಖಂಡರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷ ಮಲ್ಲೇಶ್ ನಾಯಕ್, ತಾಲೂಕು ಅಧ್ಯಕ್ಷ ಮರಿಲಿಂಗ ಪಾಟೀಲ್, ತಾಲೂಕು ಪ್ರಧಾನ ಕಾರ್ಯದರ್ಶಿ ರಮೇಶ್ ನಾಯಕ್, ನಾಗರಾಜ್ ತ್ಯಾಗಿಹಾಳ, ಸಾಮಾಜಿಕ ಜಾಲತಾಣ ಘಟಕದ ಅಧ್ಯಕ್ಷ ಇರ್ಫಾನ್ ಭುವಜಿ, ಉಪಾಧ್ಯಕ್ಷರಾದ ಅಲ್ಲಾವುದ್ದೀನ್ ಭುವಜಿ, ಗಾಫೂರ್ ಸಾಬ್ ಭುವಜಿ ಸೇರಿದಂತೆ ವಿವಿಧ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಶೈಕ್ಷಣಿಕ ಅಭಿವೃದ್ಧಿಗೆ ಬಿ.ವಿ.ಆರ್. ಕುಟುಂಬದ ಕೊಡುಗೆ ಅಪಾರ: ರಾಜಾ ಸುಭಾಷ್ಚಂದ್ರನಾಯಕ



ಮಾನ್ವಿ: ಶೈಕ್ಷಣಿಕವಾಗಿ ಹಿಂದುಳಿದಿದ್ದ ಮಾನ್ವಿ ತಾಲೂಕಿನಲ್ಲಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ, ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವ ಮೂಲಕ ಬಿ.ವಿ.ಆರ್. ಕುಟುಂಬದವರು ತಾಲೂಕಿನ ಶೈಕ್ಷಣಿಕ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ರಾಜಾ ಸುಭಾಷ್ಚಂದ್ರನಾಯಕ ಹೇಳಿದರು.

ಪಟ್ಟಣದ ಬಿ.ವಿ.ಆರ್. ಇ-ಟೆಕ್ನೋ ಶಾಲಾ ಆವರಣದಲ್ಲಿ ಬಿ.ವಿ.ಆರ್. ಎಜ್ಯುಕೇಷನ್ ಟ್ರಸ್ಟ್ ಸಂಸ್ಥಾಪಕರಾದ ಬಿ. ವೀರಾರೆಡ್ಡಿ ಹಾಗೂ ಬಿ. ಜಯಮ್ಮ ಅವರ ಪುಣ್ಯಸ್ಮರಣೆ ಅಂಗವಾಗಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣ ಸಂಸ್ಥೆಗಳು ಕೇವಲ ಪಠ್ಯಪುಸ್ತಕದ ಜ್ಞಾನವನ್ನು ನೀಡುವುದಕ್ಕೆ ಸೀಮಿತವಾಗದೆ, ವಿದ್ಯಾರ್ಥಿಗಳಲ್ಲಿ ಉತ್ತಮ ಸಂಸ್ಕಾರ, ಸಂಸ್ಕೃತಿ, ಶಿಸ್ತು ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಮೂಲಕ ಅವರನ್ನು ಸಮಾಜದ ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಬೇಕು. ಈ ನಿಟ್ಟಿನಲ್ಲಿ ತಾಲೂಕಿನ ವಿವಿಧ ಶಿಕ್ಷಣ ಸಂಸ್ಥೆಗಳು ಉತ್ತಮ ಕಾರ್ಯ ನಿರ್ವಹಿಸುತ್ತಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮಾನ್ವಿ ತಾಲೂಕು ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದಿದ್ದ ಸಂದರ್ಭದಲ್ಲಿ ಬಿ. ವೀರಾರೆಡ್ಡಿ ಹಾಗೂ ಬಿ. ಜಯಮ್ಮ ಅವರು ಶಿಕ್ಷಣ ಸಂಸ್ಥೆಯನ್ನು ಆರಂಭಿಸಿ, ಈ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಶ್ರಮಿಸಿದ್ದರು. ಅವರ ನಿಧನದ ನಂತರವೂ ಕುಟುಂಬದ ಸದಸ್ಯರು ಸಂಸ್ಥೆಯನ್ನು ಮುನ್ನಡೆಸಿಕೊಂಡು ಹೋಗುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಬಿ.ವಿ.ಆರ್. ಎಜ್ಯುಕೇಷನ್ ಟ್ರಸ್ಟ್ ಅಧ್ಯಕ್ಷ ಬಿ.ವಿ. ರೆಡ್ಡಿ ಮಾತನಾಡಿ, ನಮ್ಮ ತಂದೆ ಬಿ. ವೀರಾರೆಡ್ಡಿ ಹಾಗೂ ತಾಯಿ ಬಿ. ಜಯಮ್ಮ ಅವರ ಆಶಯದಂತೆ ಶಿಕ್ಷಣ ಸಂಸ್ಥೆಯನ್ನು ಮುನ್ನಡೆಸಲಾಗುತ್ತಿದೆ. ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳಿಗೂ ಉತ್ತಮ ಶಿಕ್ಷಣ ದೊರೆಯಬೇಕೆಂಬ ಉದ್ದೇಶದಿಂದ ಬಡ ವಿದ್ಯಾರ್ಥಿಗಳಿಂದ ಕಡಿಮೆ ಶುಲ್ಕ ಪಡೆಯಲಾಗುತ್ತಿದೆ ಎಂದು ತಿಳಿಸಿದರು.

ಶಾಲೆಯ ಶಿಕ್ಷಕರ ಪರಿಶ್ರಮ, ವಿದ್ಯಾರ್ಥಿಗಳ ನಿರಂತರ ಅಭ್ಯಾಸ ಹಾಗೂ ಪಾಲಕರ ಸಹಕಾರದಿಂದ ಈ ಬಾರಿಯ ಎಸ್‌ಎಸ್ ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಲಭಿಸಿದೆ. ರಾಜ್ಯಮಟ್ಟದಲ್ಲಿ ರ್‍ಯಾಂಕ್ ಪಡೆಯುವ ಮೂಲಕ ಶಾಲೆಯ ವಿದ್ಯಾರ್ಥಿಗಳು ಸಂಸ್ಥೆಗೆ ಕೀರ್ತಿ ತಂದಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ರಾಜ್ಯಮಟ್ಟದಲ್ಲಿ ಪ್ರಥಮ ರ್‍ಯಾಂಕ್ ಪಡೆದ ವಿದ್ಯಾರ್ಥಿ ಸುಖದೇವ ಅವರಿಗೆ ₹1 ಲಕ್ಷ ಮೊತ್ತದ ಚೆಕ್ ನೀಡಿ ಸನ್ಮಾನಿಸಲಾಯಿತು. ದ್ವಿತೀಯ ಸ್ಥಾನ ಪಡೆದ ಸಿದ್ದಾರ್ಥ ಮತ್ತು ಪ್ರಿಯಾ ಹಾಗೂ ನೀಟ್ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಗಳಿಸಿ ವೈದ್ಯಕೀಯ ಶಿಕ್ಷಣ ಪಡೆಯುತ್ತಿರುವ ಹಾಸಿನಿ ಅವರನ್ನು ನಗದು ಬಹುಮಾನ ನೀಡಿ ಗೌರವಿಸಲಾಯಿತು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಸಾಧಿಸಲು ಶ್ರಮಿಸಿದ ಶಿಕ್ಷಕರಿಗೂ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು. ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯ ಹಿಂದೆ ಶಿಕ್ಷಕರ ಪರಿಶ್ರಮ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಗಣ್ಯರು ಅಭಿಪ್ರಾಯಪಟ್ಟರು.

ಪುಣ್ಯಸ್ಮರಣೆ ಅಂಗವಾಗಿ ಪಟ್ಟಣದ ನೆರಳು ಅನಾಥಾಶ್ರಮದಲ್ಲಿರುವ ವೃದ್ಧರಿಗೆ ಹಾಗೂ ಶ್ರೀ ಚನ್ನಬಸವೇಶ್ವರ ಅಂಧಮಕ್ಕಳ ಶಾಲೆಯ ಮಕ್ಕಳಿಗೆ ವಸ್ತ್ರಗಳನ್ನು ವಿತರಿಸಲಾಯಿತು. ಅಂತರಶಾಲಾ ಮಟ್ಟದಲ್ಲಿ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲಾ ವಿದ್ಯಾರ್ಥಿಗಳು ನಡೆಸಿಕೊಟ್ಟ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು.

ಗಿಣಿವಾರ ಹಿರೇಮಠದ ಶ್ರೀ ಶಿವಾಚಾರ್ಯ ಸ್ವಾಮೀಜಿ ಕಾರ್ಯಕ್ರಮದ ದಿವ್ಯಸಾನ್ನಿಧ್ಯ ವಹಿಸಿದ್ದರು.

ಬಿ.ವಿ.ಆರ್. ಎಜ್ಯುಕೇಷನ್ ಟ್ರಸ್ಟ್ ಕಾರ್ಯದರ್ಶಿ ಪದ್ಮಾವತಿ ಬಿ.ವಿ. ರೆಡ್ಡಿ, ಸಹಕಾರ್ಯದರ್ಶಿ ಪ್ರವೀಣ್, ಮುಖ್ಯಗುರು ಸರಮತ್ ಖಾನ್, ವಟಗಲ್ ಶಾರದಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಂಜುನಾಥ ಸ್ವಾಮಿ ವಟಗಲ್, ಮಸ್ಕಿಯ ಹೋಲಿಫೇತ್ ಪಬ್ಲಿಕ್ ಶಾಲೆಯ ಅಧ್ಯಕ್ಷ ಕೆ.ವಿ. ರೆಡ್ಡಿ, ಸರ್ವೋತ್ತಮ ರೆಡ್ಡಿ, ತುಳಸೆಮ್ಮ, ನರಸಮ್ಮ, ಜಯಮ್ಮ, ಸುಜಾತಮ್ಮ, ಲಕ್ಷ್ಮೀದೇವಮ್ಮ ಸೇರಿದಂತೆ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪಾಲಕರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳು ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು: ಶಿಕ್ಷಕ ಕರಿಬಸಯ್ಯ



ಮಾನ್ವಿ: ವಿಜ್ಞಾನ ಎಂದರೆ ಕೇವಲ ಪಠ್ಯಪುಸ್ತಕಗಳಿಗೆ ಸೀಮಿತವಾದ ವಿಷಯವಲ್ಲ. ನಮ್ಮ ಸುತ್ತಮುತ್ತ ನಡೆಯುವ ಪ್ರತಿಯೊಂದು ಘಟನೆಗಳ ಹಿಂದಿರುವ ಕಾರಣಗಳನ್ನು ತಿಳಿದುಕೊಳ್ಳಲು ಪ್ರಶ್ನಿಸುವುದು, ಪರಿಶೀಲಿಸುವುದು ಹಾಗೂ ಪ್ರಯೋಗಗಳ ಮೂಲಕ ಉತ್ತರ ಕಂಡುಕೊಳ್ಳುವುದೇ ನಿಜವಾದ ವಿಜ್ಞಾನ. ಆದ್ದರಿಂದ ವಿದ್ಯಾರ್ಥಿಗಳು ಬಾಲ್ಯದಿಂದಲೇ ಪ್ರಶ್ನಿಸುವ ಮನೋಭಾವ ಮತ್ತು ವೈಜ್ಞಾನಿಕ ಚಿಂತನೆಯನ್ನು ಬೆಳೆಸಿಕೊಳ್ಳಬೇಕು ಎಂದು ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕ ಕರಿಬಸಯ್ಯ ಹೇಳಿದರು.

ಪಟ್ಟಣದ ಕಲ್ಮಠ ಶಾಲೆಯಲ್ಲಿ ಗುರುವಾರ ಆಯೋಜಿಸಿದ್ದ ಅಂತಾರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆಕಾಶ ನೀಲಿಯಾಗಿ ಕಾಣುವುದೇಕೆ? ಮಳೆ ಏಕೆ ಬರುತ್ತದೆ? ಎಂಬಂತಹ ಸಾಮಾನ್ಯ ಪ್ರಶ್ನೆಗಳಿಂದಲೇ ವೈಜ್ಞಾನಿಕ ಅನ್ವೇಷಣೆ ಆರಂಭವಾಗುತ್ತದೆ. ವಿದ್ಯಾರ್ಥಿಗಳು ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸೂಕ್ಷ್ಮವಾಗಿ ಗಮನಿಸಿ, ಪ್ರತಿಯೊಂದು ವಿಷಯದ ಹಿಂದಿರುವ ವೈಜ್ಞಾನಿಕ ಕಾರಣಗಳನ್ನು ತಿಳಿದುಕೊಳ್ಳಲು ಪ್ರಯತ್ನಿಸಬೇಕು. ವಿಜ್ಞಾನವು ನಮ್ಮ ದೈನಂದಿನ ಜೀವನದ ಅವಿಭಾಜ್ಯ ಅಂಗವಾಗಿದ್ದು, ಮಾನವನ ಜೀವನಮಟ್ಟ ಸುಧಾರಣೆ ಹಾಗೂ ಜಗತ್ತಿನ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ತಿಳಿಸಿದರು.

ಕಲ್ಮಠ ಆಯುರ್ವೇದ ಕಾಲೇಜಿನ ಆಡಳಿತಾಧಿಕಾರಿ ಉಮಾಶಂಕರ ಮಾತನಾಡಿ, ವಿಜ್ಞಾನಿಗಳ ಸಾಧನೆಗಳ ಹಿಂದೆ ಕುತೂಹಲ, ನಿರಂತರ ಪರಿಶ್ರಮ ಹಾಗೂ ಸಂಶೋಧನಾ ಮನೋಭಾವ ಅಡಗಿದೆ. ಸರ್ ಐಸಾಕ್ ನ್ಯೂಟನ್ ಅವರು ಮರದಿಂದ ಸೇಬು ಕೆಳಗೆ ಬೀಳುವ ಘಟನೆಯ ಕುರಿತು ಚಿಂತನೆ ನಡೆಸಿದ್ದು, ಗುರುತ್ವಾಕರ್ಷಣೆಯ ಅಧ್ಯಯನಕ್ಕೆ ಪ್ರೇರಣೆಯಾಯಿತು. ಅದೇ ರೀತಿ ಆರ್ಕಿಮಿಡಿಸ್ ಹಾಗೂ ಸರ್ ಎಂ. ವಿಶ್ವೇಶ್ವರಯ್ಯ ಅವರ ವೈಜ್ಞಾನಿಕ ಚಿಂತನೆಗಳು ಮತ್ತು ಸಾಧನೆಗಳು ವಿದ್ಯಾರ್ಥಿಗಳಿಗೆ ಮಾದರಿಯಾಗಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳು ವಿಜ್ಞಾನವನ್ನು ಕೇವಲ ಪರೀಕ್ಷೆಯಲ್ಲಿ ಅಂಕ ಗಳಿಸುವ ವಿಷಯವಾಗಿ ಪರಿಗಣಿಸದೆ, ಪ್ರಾಯೋಗಿಕವಾಗಿ ಕಲಿಯುವ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕು. ಹೊಸ ಆವಿಷ್ಕಾರಗಳು ಹಾಗೂ ಸಂಶೋಧನೆಗಳ ಬಗ್ಗೆ ತಿಳಿದುಕೊಳ್ಳುವ ಮೂಲಕ ತಮ್ಮ ಜ್ಞಾನವನ್ನು ವೃದ್ಧಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ರಜಪೂತ್ ನಾವೆಲ್ಟೀಸ್ ಮಾಲೀಕ ಲಲಿತ್ ಸಿಂಗ್ ಹಾಗೂ ಕಲ್ಮಠ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಮಂಜುನಾಥ ಕಮತರ ಅವರು ವಿಜ್ಞಾನ ದಿನಾಚರಣೆಯ ಮಹತ್ವ ಕುರಿತು ಮಾತನಾಡಿದರು.

ವಿಜ್ಞಾನ ದಿನಾಚರಣೆಯ ಅಂಗವಾಗಿ ಕಲ್ಮಠ ಶಾಲೆಯ ವಿಜ್ಞಾನ ಶಿಕ್ಷಕರಾದ ನರಸಿಂಹಲು ಬಿ. ಹಾಗೂ ಗೀತಾ ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ವಿವಿಧ ವೈಜ್ಞಾನಿಕ ಪ್ರಯೋಗಗಳನ್ನು ಪ್ರದರ್ಶಿಸಿದರು.

ಬೆಂಕಿಯಿಲ್ಲದೆ ಹಾಲು ಉಕ್ಕಿಸುವುದು, ಬೆಂಕಿಯಿಲ್ಲದೆ ಹತ್ತಿಯನ್ನು ಉರಿಸುವುದು, ಆಮ್ಲ ಮತ್ತು ಪ್ರತ್ಯಾಮ್ಲಗಳ ತಟಸ್ಥೀಕರಣ, ಲೋಹಗಳು ಆಮ್ಲಗಳೊಂದಿಗೆ ವರ್ತಿಸುವ ವಿಧಾನ, ನೀರಿನ ಶುದ್ಧೀಕರಣ, ಮೆಗ್ನೀಸಿಯಂ ತಂತಿಯನ್ನು ಉರಿಸುವುದು, ಬಿಸಿಗಾಳಿ ಮೇಲಕ್ಕೆ ಏರುವುದು, ವಸ್ತುಗಳು ಸ್ಥಳವನ್ನು ಆಕ್ರಮಿಸಿಕೊಳ್ಳುವುದು ಹಾಗೂ ವಸ್ತುಗಳು ಉರಿಯಲು ಆಮ್ಲಜನಕದ ಅವಶ್ಯಕತೆ ಇರುವುದನ್ನು ತೋರಿಸುವುದು ಸೇರಿದಂತೆ ಹಲವು ಪ್ರಯೋಗಗಳನ್ನು ವಿದ್ಯಾರ್ಥಿಗಳು ವೇದಿಕೆಯಲ್ಲಿ ಪ್ರಾತ್ಯಕ್ಷಿಕೆಗಳ ಮೂಲಕ ವಿವರಿಸಿದರು.

ವಿದ್ಯಾರ್ಥಿಗಳು ಪ್ರದರ್ಶಿಸಿದ ವೈಜ್ಞಾನಿಕ ಪ್ರಯೋಗಗಳು ಸಹಪಾಠಿಗಳಲ್ಲಿ ಕುತೂಹಲ ಮೂಡಿಸಿದವು. ಪ್ರತಿಯೊಂದು ಪ್ರಯೋಗದ ಹಿಂದಿರುವ ವೈಜ್ಞಾನಿಕ ತತ್ವಗಳನ್ನು ತಿಳಿದುಕೊಂಡ ವಿದ್ಯಾರ್ಥಿಗಳು ಚಪ್ಪಾಳೆ ತಟ್ಟಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಲ್ಮಠ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಪ್ರಭಯ್ಯಸ್ವಾಮಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಇಂತಹ ಪ್ರಾಯೋಗಿಕ ಕಾರ್ಯಕ್ರಮಗಳು ಮಕ್ಕಳಲ್ಲಿ ವಿಜ್ಞಾನದ ಬಗ್ಗೆ ಆಸಕ್ತಿ ಮೂಡಿಸುವುದರ ಜೊತೆಗೆ ಅವರ ಸೃಜನಶೀಲತೆ ಹಾಗೂ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಕೇಮ್ಯಾನಾಯ್ಕ, ಎಂ.ಎಂ. ಹಿರೇಮಠ, ಭ್ರಮರಾಂಬ, ಪ್ರಭಾವತಿ, ಸೌಮ್ಯ, ರಾಘವೇಂದ್ರ ಹಾಗೂ ಕಲ್ಮಠ ಶಾಲಾ ಸಂಸತ್ ಸದಸ್ಯರಾದ 9ನೇ ತರಗತಿಯ ಪ್ರದೀಪ್ ಕುಮಾರ್ ಮತ್ತು 7ನೇ ತರಗತಿಯ ಓಂಕಾರ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶಿಕ್ಷಕಿ ರೂಪಾ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕಿ ರಿಜ್ವಾನ ಬೇಗಂ ಸ್ವಾಗತಿಸಿದರು. ಮಹಾಂತಮ್ಮ ವಂದಿಸಿದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K